

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

SIHI KAHI

KANNADA DAILY MORNING BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

RNI REG No. : KARKAN/2016/75068

Volume : 07 | Issue : 108 | Tuesday 31-12-2024 | E-mail : maruti.b.hosamani76@gmail.com | Page: 4 | Price : Rs. 1/-


## ಸರ್ಕಾರಿ ನೌಕರರ ಸಂಘದ ಚುನಾವಣೆ ವಿಷಯಕ್ಕೆ ಆಧಾರ ರಹಿತ ಆರೋಪ ಮಾಡಿರುವ ದೈಹಿಕ ಶಿಕ್ಷಕ ಮಂಜುನಾಥ್ ವಿರುದ್ಧ ಶಿಸ್ತು ಕ್ರಮಕ್ಕೆ ಒತ್ತಾಯ




**ಹೊಸಪೇಟೆ :** ಸರ್ಕಾರಿ ನೌಕರರ ಸಂಘದ ಚುನಾವಣೆ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಮೇಲೆ ಆಧಾರ ರಹಿತ ಆರೋಪ ಮಾಡಿರುವ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಗಂಗಾವತಿ ಭೀಮಪ್ಪನವರ ಪದವಿ ಪೂರ್ವ ಕಾಲೇಜ್ ಪ್ರೌಢಾ ಶಾಲಾ ವಿಭಾಗದ ದೈಹಿಕ ಶಿಕ್ಷಕರಾದ ಎಂ.ಪಿ.ಎಂ ಮಂಜುನಾಥ ರವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳ ಬೇಕೆಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ವಿಜಯನಗರ ಜಿಲ್ಲಾ ಘಟಕವು ಒತ್ತಾಯಿಸಿದೆ.

ವಿಜಯನಗರ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಿಗೆ (ಡಿಡಿಪಿಐ) ಸವಿವರವಾದ ಮನವಿ ಪತ್ರ ಸಲ್ಲಿಸಿರುವ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ವಿಜಯನಗರ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ್ ಬಣ್ಣದ ಮನೆ, ಮತ್ತು ಮುಖಂಡರಾದ ರವಿಕುಮಾರ್, ಸೂರ್ಯನಾರಾಯಣ, ಶಿವಕುಮಾರ್, ಮಹಾಂತೇಶ್ ಮತ್ತಿತರರು ಹಗರಿಬೊಮ್ಮನಹಳ್ಳಿ ಗಂಗಾವತಿ ಭೀಮಪ್ಪ ನವರ ಪದವಿ ಪೂರ್ವ ಕಾಲೇಜ್ ಪ್ರೌಢ ಶಾಲಾ ವಿಭಾಗದ ದೈಹಿಕ ಶಿಕ್ಷಕರು ಹಾಗೂ ಹಗರಿಬೊಮ್ಮನಹಳ್ಳಿ ತಾಲ್ಲೂಕು ಸರ್ಕಾರಿ ನೌಕರ ಎಂ.ಪಿ.ಎಂ ಮಂಜುನಾಥ್ ಸಂಘದ ಅಧ್ಯಕ್ಷರಾದ ಎಂಬುವವರು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾವಣಾ ವಿಷಯದ ಬಗ್ಗೆ ಮಾಧ್ಯಮಗಳ ಮುಂದೆ ಮಾತನಾಡುತ್ತಾ, ಸರ್ಕಾರದ ಹಣದ ಆಮಿಷ ಮತ್ತು ಒತ್ತಡಗಳ ಮಧ್ಯೆ ಷಡಕ್ಷರಿ ಅವರು ಗೆದ್ದಿದ್ದಾರೆ ಎಂದು ಆಧಾರ ರಹಿತವಾಗಿ ಕರ್ನಾಟಕ ಸರ್ಕಾರದ ವಿರುದ್ಧ ಆರೋಪ ಮಾಡಿದ್ದಾರೆ. ಈ ವಿಷಯದಲ್ಲಿ ಯಾರು ಯಾರಿಗೆ ಹಣದ ಆಮಿಷವನ್ನು ಸರ್ಕಾರ ಒಡ್ಡಿದೆ ಎಂಬುದನ್ನು ದೈಹಿಕ ಶಿಕ್ಷರಾದ ಎಂ.ಪಿ.ಎಂ. ಮಂಜುನಾಥ್ ರವರು ಸಾಬೀತು ಪಡಿಸಬೇಕು ಎಂದು ಒತ್ತಾಯಿಸಿರುವ ಅವರುಗಳು ದೈಹಿಕ ಶಿಕ್ಷರಾದ ಎಂ.ಪಿ.ಎಂ. ಮಂಜುನಾಥ್ ರವರು ಒಬ್ಬ ಸರ್ಕಾರಿ ನೌಕರರಾಗಿ ರಾಜಕಾರಣಿಯಂತೆ ವರ್ತಿಸುವುದು ಸರಿಯಲ್ಲ. ಸರ್ಕಾರಿ ಸೇವಾ ನಿಯಮಗಳು ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳಿಗೆ ತದ್ವಿರುದ್ಧವಾಗಿ ಎಂ.ಪಿ. ಎಂ ಮಂಜುನಾಥ್ ರವರು ವರ್ತಿಸಿ ಸೇವಾ ನಿಯಮಗಳನ್ನು ಉಲ್ಲಂಘಿಸಿರುತ್ತಾರೆ. ಆದ್ದರಿಂದ ಇವರ ವಿರುದ್ಧ ರಾಜ್ಯ ಸರ್ಕಾರ ಕೂಡಲೇ ಶಿಸ್ತು ಕ್ರಮ ಕೈಗೊಳ್ಳ ಬೇಕೆಂದು ಸೋಮಶೇಖರ್ ಬಣ್ಣದ ಮನೆ ಮತ್ತಿತರರು ಆಗ್ರಹಿಸಿದ್ದಾರೆ.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಮಾಲತೇಶ್.ಶೆಟ್ಟರ್.ಹೊಸಪೇಟೆ**

## ಎಸ್.ಎಸ್ ಕಾಲೇಜ್ನಲ್ಲಿ ಸಂವಿಧಾನ ಸಮ್ಮಾನ, ವಿದ್ಯಾರ್ಥಿಗಳೊಂದಿಗೆ – ಸಂವಾದ ಕಾರ್ಯಕ್ರಮ



**ಗದಗ :** ನಗರದ ಡಾ, ಬಿ.ಎಫ್ ದಂಡಿನ ಸಂಸ್ಥಾಪಕ ವಿದ್ಯಾ ಸಂಸ್ಥೆಯ ಕೆ.ಎಸ್. ಎಸ್ ಕಾಲೇಜ್ನಲ್ಲಿ ಸಂವಿಧಾನ ಸಮ್ಮಾನ ಕಾರ್ಯಕ್ರಮ ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ಇತ್ತೀಚಿಗೆ ಜರುಗಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಾಗರಾಜ ಕುಲಕರ್ಣಿ ಪಾಲ್ಗೊಂಡು ಮಾತನಾಡಿ, ಭಾರತದ ಸಂವಿಧಾನ ಇತ್ತೀಚಿನ ದಿನಗಳಲ್ಲಿ ಪಂಚಾಯತ್ಗಳಿಂದ ಪಾರ್ಲಿಮೆಂಟ್ ವರೆಗೆ ಹೆಚ್ಚು ಚರ್ಚೆಯ ವಿಷಯವಾಗಿದೆ. ಕಳೆದ ವಿಧಾನ ಸಭೆಯಲ್ಲಿ ವಿಶ್ವೇಶ್ವರ ಹೆಗಡೆ ಕಾಗೇರಿಯವರು ಸಭಾಧ್ಯಕ್ಷರಿದ್ದಾಗ ಸಂವಿಧಾನದ ಕುರಿತಾದ ದೀರ್ಘವಾದ ಚರ್ಚೆ ಆಗಿದ್ದನ್ನು ನಾವು ನೋಡಿದ್ದೇವೆ. ಡಾ, ಬಾಬಾ ಸಾಹೇಬ್ ಅಂಬೇಡ್ಕರ್ ಅತ್ಯಂತ ಅಧ್ಯಯನ ಪೂರ್ಣವಾದ ಮಾನವಿಯ ಮೌಲ್ಯಗಳನ್ನು ಒಳಗೊಂಡ ಶ್ರೇಷ್ಠ ಸಂವಿಧಾನವನ್ನು ನಮಗೆ ನೀಡಿದ್ದಾರೆ. ಹಾಗಾಗಿ ಅಂಬೇಡ್ಕರರ ಚಿಂತನೆ ಹಾಗೂ ನಡೆದು ಬಂದ ದಾರಿಯನ್ನು ಇಂದಿನ ಪೀಳಿಗೆ ಅಧ್ಯಯನ ಮಾಡುವುದರಿಂದ ಅಂಬೇಡ್ಕರರ ನಿಜವಾದ ಜೀವನದ ಘಟನಾವಳಿಗಳನ್ನು ತಿಳಿಯಲು ಸಾಧ್ಯ. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಅತೀ ಹೆಚ್ಚು ಸಂವಿಧಾನ ತಿದ್ದುಪಡಿ ಮಾಡಿ ಸಂವಿಧಾನದ ಆಶಯಕ್ಕೆ ಭಂಗ ತರುವ ಕೆಲಸವನ್ನು ಮಾಡಿದೆ ಎಂದರು.

ರಮೇಶ ಸಜ್ಜಗಾರ ಮಾತನಾಡಿ. ಡಾ, ಬಿ.ಆರ್ ಅಂಬೇಡ್ಕರ್ ಅವರು 32 ಪದವಿಯನ್ನು ಪಡೆದು ಅಂದಿನ ಕಾಲದ ವಿಶ್ವದ ಶ್ರೇಷ್ಠ ಜ್ಞಾನವಂತರಲ್ಲಿ ಒಬ್ಬರಾಗಿದ್ದರು ಆದರೆ ಅವರನ್ನು ನೆಹರು ಕಾಲದಲ್ಲಿ ಚುನಾವಣೆಯ ಸ್ಪರ್ಧೆಯಲ್ಲಿ ಅವರ ವಿರುದ್ಧ ಅವರ ಆಪ್ತ ಸಹಾಯಕನಿಂದಲೇ ಕಾಂಗ್ರೆಸ್ ಸೋಲಿಸಿತು. ಅಂಬೇಡ್ಕರರಿಗೆ ಭಾರತರತ್ನ ಪ್ರಶಸ್ತಿ ನೀಡಲು ಕಾಂಗ್ರೆಸೇತರ ಸರ್ಕಾರ ಬರಬೇಕಾಯಿತು. ಹೀಗಾಗಿ ಅಂಬೇಡ್ಕರ್ ಸಾಗಿ ಬಂದ ನಿಜವಾದ ದಾರಿಯನ್ನು ನಾವು ಅಧ್ಯಯನ ಮಾಡಿದರೆ ಅಂಬೇಡ್ಕರರ ವಾಸ್ತವ ಬದುಕು ನಮಗೆ ಪ್ರೇರಣೆಯಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಡಾ, ಕಮಲಾಕ್ಷೀ ಅಂಗಡಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರಿನ್ಸಿಪಾಲರಾದ ಡಿ.ಬಿ ಗವಾನಿ, ಉಮೇಶ ಹಿರೇಮಠ, ಉಪನ್ಯಾಸಕರಾದ ಸತೀಶ ಪಾಸಿ, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ ರೋಣ.ಗದಗ**

## ಸಚಿವ ಪ್ರಿಯಾಂಕ ಖರ್ಗೆ ನೈತಿಕತೆಯ ಹೊಣೆ ಹೊತ್ತು ಕೂಡಲೇ ರಾಜೀನಾಮೆ ನೀಡಲಿ – ದೇವಿಂದ್ರ ಮುತ್ತುಕೋಡ್ ಅಗ್ರಹ



**ಕಟ್ಟಿತೂಗಾಂವ :** ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಕಟ್ಟಿತೂಗಾಂವ ಗ್ರಾಮದ ಕಡು ಬಡ ಕುಟುಂಬದ ಯುವ ಗುತ್ತಿಗೆದಾರ ಸಚಿನ್ ಪಂಚಾಳ್ (26) ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದಾನೆ.

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವ ಪ್ರಿಯಾಂಕ ಖರ್ಗೆ ಅವರ ಆಪ್ತ ಕಲಬುರಗಿಯ ಕಾಂಗ್ರೆಸ್ ಮುಖಂಡ ರಾಜು ಕಪನೂರ ಮತ್ತು ಅವರ ಗ್ಯಾಂಗ್ ಸೇರಿ ಲಕ್ಷ ಲಕ್ಷದ ಹಣದ ಆಮಿಷ ಒಡ್ಡಿದ್ದಲ್ಲದೆ, ಜೊತೆಗೆ ಕೊಲೆ ಮಾಡುವುದಾಗಿ ಬೆದರಿ–ಕೆ ಹಾಕಿದ್ದಾರೆ. ಮನನೊಂದು ಜೀವ ಭಯಕ್ಕೆ ಅಂಜಿ ಯುವ ಗುತ್ತಿಗೆದಾರ ಸಚಿನ್ ಪಂಚಾಳ್ ಗುರುವಾರ ರೈಲಿಗೆ ತಲೆ ಕೊಟ್ಟು ಸಾವಿಗೆ ಶರಣಾಗಿದ್ದಾನೆ.

ಇನ್ನೂ ಡೆತ್ ನೋಟ್ ನಲ್ಲಿ ಶ್ರೀರಾಮ ಸೇನೆಯ ರಾಷ್ಟ್ರೀಯ ಗೌರವಾಧ್ಯಕ್ಷ ಶ್ರೀ ಆಂದೋಲದ ಸಿದ್ದಲಿಂಗ ಸ್ವಾಮೀಜಿ ಮತ್ತು ಬಿಜೆಪಿಯ ಮುಖಂಡರುಗಳಾದ ಶಾಸಕ ಬಸವರಾಜ್ ಮುತ್ತಿಮುಡು ಕಲಬುರ್ಗಿ ನಗರದ ಜಿಲ್ಲಾಧ್ಯಕ್ಷ ಚಂದು ಪಾಟೀಲ್, ಹಾಗೂ ಮಣಿಕಂಠ ರಾಠೋಡ್, ರವರುಗಳ ಹತ್ಯೆಗೆ ಸಂಚು ರೂಪಿಸಲಾಗಿತ್ತು ಎಂದು ಡೆತ್ ನೋಟ್ ಮುಖಾಂತರ ತಿಳಿದು ಬಂದಿದೆ.

ಕೃತ್ಯವನ್ನು ಖಂಡಿಸಿ ಮಾತನಾಡಿದ ಬಿಜೆಪಿಯ ಜೀವರ್ಗಿ ತಾಲೂಕು ಅಧ್ಯಕ್ಷ ದೇವಿಂದ್ರ ಮುತ್ತುಕೂಡ ರವರು ಆತ್ಮಹತ್ಯೆಗೆ ಶರಣಾದ ಯುವ ಗುತ್ತಿಗೆದಾರ ಸಚಿನ್ ಪಾಂಚಾಳ್ ಕುಟುಂಬಕ್ಕೆ ಸರ್ಕಾರ ಸೂಕ್ತ ಪರಿಹಾರ ಕೊಡುತ್ತೇವೆ ಎಂದು ಭರವಸೆ ನೀಡಬೇಕು, ಸಚಿವ ಪ್ರಿಯಾಂಕ ಖರ್ಗೆ ಅವರ ಆಪ್ತ ಕಾಂಗ್ರೆಸ್ ಮುಖಂಡ ರಾಜು ಕಪಾನೂರ ಮತ್ತು ಅವರ ಗ್ಯಾಂಗ್ ನ್ನು ಕೂಡಲೇ ಅವರನ್ನು ಬಂಧಿಸಿ ಸೂಕ್ತ ತನಿಖೆ ಮಾಡಬೇಕು, ಮತ್ತು ಆಂದೋಲ ಶ್ರೀಗಳು ಸೇರಿದಂತೆ ಬಿಜೆಪಿಯ ಮುಖಂಡರುಗಳಾದ ಶಾಸಕ ಬಸವರಾಜ್ ಮುತ್ತಿಮುಡು ಚಂದು ಪಾಟೀಲ್ ಮತ್ತು ಮಣಿಕಂಠ ರಾಠೋಡ್ ರವರುಗಳಿಗೆ ರಕ್ಷಣೆ ಒದಗಿಸಬೇಕು. ಹಿಂದೆ ನಮ್ಮ ಸರ್ಕಾರ ಅಂ–ದ್ರೆ ಬಿಜೆಪಿ ಆಳ್ವಿಕೆಯಲ್ಲಿದ್ದಾಗ ಆ ಸಂದರ್ಭದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆಯ ಸಚಿವರಾಗಿದ್ದ ಕೆ.ಎಸ್ ಈಶ್ವರಪ್ಪ ನವರನ್ನು ಆರೋಪಿಸಿ ಪ್ರಿಯಾಂಕ ಖರ್ಗೆ ಅವರು ನೈತಿಕತೆ–ಯ ಹೊಣೆ ಹೊತ್ತು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಹೇಳಿದ್ದೀರಿ ಈಗ ಆ ಸಂದರ್ಭವೇ ನಿಮಗೆ ಎದುರಾಗಿದೆ ನೈತಿಕತೆಯ ಹೊಣೆ ಹೊತ್ತು ಸಚಿವರೇ ತಕ್ಷಣವೇ ನೀವು ರಾಜೀನಾಮೆ ನೀಡಬೇಕು ಎಂದು ಅಗ್ರಹಿಸಿದ್ದಾರೆ.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಭೀಮಾಶಂಕರ್.ನೀಲಕೋಡ. ಇಜೇರಿ**

## ಯರಗಟ್ಟಿ ಶಾಲೆಯಲ್ಲಿ ಅಪರಾಧ ತಡೆ ಮಾಸಾಚರಣೆ



**ರಬಕವಿ–ಬನಹಟ್ಟಿ :** ಬನಹಟ್ಟಿ ಪೊಲೀಸ್ ಠಾಣೆ ವತಿಯಿಂದ ಯರಗಟ್ಟಿಯ ಸರ್ಕಾರಿ ಶಾಲೆ ಆವರಣದಲ್ಲಿ ಅಪರಾಧ ತಡೆ ಮಾಸಾಚರಣೆ ಕಾರ್ಯಕ್ರಮ ಜರುಗಿತು.

ಪಿ.ಎಸ್.ಐ. ಶಾಂತಾ ಹಳ್ಳಿ ಮಾತನಾಡಿ, ಮನೆಯಲ್ಲಿ ಒಂಟಿಯಾಗಿರುವಾಗ ಮುಂಬಾಗಿಲು ಹಾಕಿಕೊಂಡು ಕೆಲಸ ಮಾಡಬೇಕು. ಬೆಲ್ ಮಾಡಿದಾಗ ತಕ್ಷಣ ಬಾಗಿಲು ತೆರೆಯದೆ ಕಿಟಕಿಯಿಂದ ನೋಡಿ ಬಂದವರು ಯಾರು ಎಂಬುದನ್ನು ಖಚಿತ ಪಡಿಸಿಕೊಂಡ ನಂತರ ವ್ಯವಹರಿಸಬೇಕು. ಅಪರಿಚಿತರು ಮನೆಗೆ ಬಂದು ಕುಡಿಯಲು ನೀರು, ವಿಳಾಸ ಇತ್ಯಾದಿ ಕೇಳುವಾಗ ಜಾಗ್ರತಿಯಿಂದಿರಬೇಕು. ಬೆಲೆ ಬಾಳುವ ವಸ್ತುಗಳನ್ನು ಕಿಟಕಿ, ಬಾಗಿಲು ಬಳಿ ಇಡಬೇಡಿ. ಅಪರಾಧಿಗಳಿಗೆ ಪ್ರಚೋದನೆಯಾಗುವಂತೆ ಮೈ ಮೇಲೆ ಒಡವೆಗಳನ್ನು ಧರಿಸಿ ತಿರುಗಾಡುವದನ್ನು ಆದಷ್ಟು ತಪ್ಪಿಸಿ ಎಂದರು. ಧ್ವನಿವರ್ಧಕ ನಿಷೇಧ, ಶಬ್ದಮಾಲಿನ್ಯ ನಿಯಂತ್ರಣಕ್ಕೆ ಎರಡು ಸೂಚನಾ ಫಲಕಗಳನ್ನು ಅಳವಡಿಸಲಾಯಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಎ. ಕೆ. ಬಸಣ್ಣವರ ಮಾತನಾಡಿ, ಉತ್ತಮ ಹವ್ಯಾಸಗಳೊಂದಿಗೆ ಕಲಿಕಾ ಸಾಮರ್ಥ್ಯ ಹೆಚ್ಚಿಸುವಲ್ಲಿ ವಿದ್ಯಾರ್ಥಿಗಳು ಶಿಕ್ಷಕರ ಮಾರ್ಗದರ್ಶನದೊಂದಿಗೆ ಬೆಳೆಯಬೇಕು. ಅಂದಾಗ ಜವಾಬ್ದಾರಿಯುತ ನಾಗರಿಕನಾಗಿ ಹೊರಹೊಮ್ಮಲು ಸಾಧ್ಯವೆಂದರು.

ಶಾಂತವ್ವ ಕಂಕಣವಾಡಿ ಅಧ್ಯಕ್ಷತೆ ವಹಿಸಿದ್ದರು. ಎಮ್. ಐ. ಚಿತ್ರಭಾನುಕೋಟಿ, ಉತ್ತಮಕುಮಾರ ಮಗದುಮ್, ಕಲ್ಯಾಣಿ, ಕಿರಣ ಲೋಕಾಪೂರ, ಐ. ಡಿ. ನದಾಫ್, ಸಿ.ಆರ್.ಪಿ. ಕೊಕಟನೂರ, ಎಸ್.ಡಿ.ಎಂ.ಸಿ. ಅಧ್ಯಕ್ಷ ಮಹಾದೇವ ಸನದಿ. ಎಸ್. ಎಚ್. ರಾಮದುರ್ಗ, ಪಿ. ಬಿ. ಮೆಕ್ಕಳಕಿ ಹಾಜರಿದ್ದರು.

## ನೀಲಕಂಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಬಹುಮಾನ ವಿತರಣೆ



**ತೇರದಾಳ :** ಬದುಕಿನಲ್ಲಿ ಯಶಸ್ಸಿನ ಮೆಟ್ಟಿಲು ಏರಬೇಕಾದರೆ ವಿದ್ಯಾರ್ಥಿ ಜೀವನ ಬಹಳಷ್ಟು ಅಮೂಲ್ಯವಾಗಿದೆ. ಆದ್ದರಿಂದ ಪಾಲಕರು ಹಾಗೂ ಶಿಕ್ಷಕರು ಮಕ್ಕಳ ಭವಿಷ್ಯ ನಿರ್ಧರಿಸುವ ಶಕ್ತಿಗಳು ಎಂದು ಬಿ.ಇ.ಓ. ಎ. ಕೆ. ಬಸನ್ನವರ ಹೇಳಿದರು.

ಇಲ್ಲಿನ ರಬಕವಿ ರಸ್ತೆಯ ಕುರುಹಿನಶೆಟ್ಟಿ ನೀಲಕಂಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು. ಹವ್ಯಾಸ ಹಾಗೂ ವಿಚಾರ ಧಾರೆಗಳ ಮೇಲೆ ಜೀವನದಲ್ಲಿ ಸಾಧನೆಯ ಕನಸು ನಿರ್ಧಾರವಾಗುತ್ತದೆ. ಆ ದಿಶೆಯಲ್ಲಿ ಮಕ್ಕಳು ಯಾವ ಹವ್ಯಾಸ ಹೊಂದುತ್ತೀರಿ ಎಂಬುದನ್ನು ನೀವೇ ಆಯ್ಕೆ ಮಾಡಿಕೊಳ್ಳಬೇಕೆಂದು ಹೇಳಿದರು. ಸಾನಿಧ್ಯ ವಹಿಸಿದ್ದ ಕಾಗವಾಡ ಗುರುದೇವ ಆಶ್ರಮದ ಯತೀಶ್ವರಾನಂದ ಶ್ರೀಗಳು ಮಾತನಾಡಿ, ಬದುಕು ಬಹಳಷ್ಟು ಸ್ಪರ್ಧಾತ್ಮಕವಾಗುತ್ತಿದೆ. ಸಾಧನೆಗೆ ಸರಿಯಾದ ಮಾರ್ಗ ಹಾಗೂ ನಿರಂತರ ಪರಿಶ್ರಮ ಪ್ರಮುಖ ಅಂಶ. ಆದ್ದರಿಂದ ವಿದ್ಯಾರ್ಥಿಗಳು ಸಾಧನೆ ಕನಸು ಕಂಡರೆ ಸಾಲದು. ಅದನ್ನು ಸಾಧಿಸುವ ತವಕ ಹೆಚ್ಚಾಗುತ್ತಿರಬೇಕೆಂದು ಹೇಳಿದರು. ತಹಶೀಲ್ದಾರ್ ವಿಜಯಕುಮಾರ ಕಡಕೋಳ, ಸಿ.ಆರ್.ಸಿ. ಎ. ಆರ್. ಮುಧೋಳ ಮಾತನಾಡಿದರು. ಕಾರ್ಯದರ್ಶಿ ಎಂ. ಎಂ. ಜಾಡರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕುರುಹಿನಶೆಟ್ಟಿ ಸಂಘದ ಸ್ಥಳೀಯ ಘಟಕದ ಅಧ್ಯಕ್ಷ ಪರಪ್ಪ ಆಲಗುಂಡಿ ಅಧ್ಯಕ್ಷತೆ ವಹಿಸಿದ್ದರು. ಮಹೇಶ ಸೋರಗಾಂವಿ, ಸಂಜು ಖವಾಸಿ, ಭದ್ರು ಮನ್ಮಿ, ಪರಪ್ಪ ಮೇಗಾಡಿ, ರಾಚಪ್ಪ ಮನ್ಮಿ, ಬಸವರಾಜ ಚಿಂಚಖಂಡಿ, ಶ್ರೀಶೈಲ ಮೇಗಾಡಿ, ಮಲ್ಲಪ್ಪ ಜಾಡಗೌಡರ ಉಪಸ್ಥಿತರಿದ್ದರು.

## ಪ್ರಾಥಮಿಕ ಹಂತದಲ್ಲಿಯೇ ಮೊಳಕೆ ಒಡೆಯುವಂಥ ಪ್ರಯತ್ನ ಮಾಡಿ: ಡಿಐಜಿ ಶಿವಸಿಂಪಿ




**ರಬಕವಿ–ಬನಹಟ್ಟಿ :** ಇಂದು ತಂತ್ರಜ್ಞಾನ ತುಂಬಾ ಎತ್ತರಕ್ಕೆ ಬೆಳೆಯುತ್ತಿದೆ. ಮಕ್ಕಳ ಸಾಧನೆಗೆ ಪ್ರಾಥಮಿಕ ಹಂತದಲ್ಲಿಯೇ ಮೊಳಕೆ ಒಡೆಯುವಂಥ ಪ್ರಯತ್ನ ಶಿಕ್ಷಕರು ಮಾಡಬೇಕು ಎಂದು ವಾರಣಾಸಿಯ ಡಿಐಜಿ ಚನ್ನಪ್ಪ ಶಿವಶಿಂಪಿ ಹೇಳಿದರು.

ಮಂಗಳವಾರ ರಬಕವಿಯ ರಾಂಪುರ ಜ್ಞಾನೋದಯ ಶಿಕ್ಷಣ ಸಂಸ್ಥೆಯ 37 ನೇ ಜ್ಞಾನೋದಯ ಉತ್ಸವ ಹಾಗೂ ಸಾಧಕ ಮಕ್ಕಳಿಗೆ ಪಾರಿತೋಷಕ ವಿತರಣಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿನ ನಿಜವಾದ ಸಾಧನೆಯ ಗುರಿಯನ್ನು ಪ್ರಾಥಮಿಕ ಹಂತದಲ್ಲಿ ಗುರುತಿಸಿ ಅದಕ್ಕೆ ಪ್ರೋತ್ಸಾಹ ನೀಡುವ ಕೆಲಸವನ್ನು ಶಿಕ್ಷಕರು ಮಾಡಬೇಕಿದೆ. ಅಂದಾಗ ಮಾತ್ರ ದೇಶದ ಕೀರ್ತಿ ಹೆಚ್ಚಾಗಲು ಸಾಧ್ಯ. ಆದರೆ ಸಾಧನೆಗೆ ನಿಜವಾದ ಗುರಿಯ ನಿಖರತೆ ಬೇಕು ಎಂದು ತಿಳಿಸಿದರು.

ಬಿ.ಇ.ಓ. ಅಶೋಕ ಕೆ. ಬಸಣ್ಣವರ, ನಿವೃತ್ತ ಪ್ರಾಚಾರ್ಯ ಡಾ. ಎಸ್. ಎಸ್. ಹೂಲಿ ಮಾತನಾಡಿದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಹಳೇ ಹುಬ್ಬಳ್ಳಿ ವೀರಬಿಕ್ಷಾವರ್ತಿ ಮಠದ ಶ್ರೀ ಶಿವಶಂಕರ ಶಿವಾಚಾರ್ಯರು ಮಾತನಾಡಿ, ಮಕ್ಕಳು ಕೇವಲ ಸರ್ಟಿಫಿಕೇಟಿಗಾಗಿ ಓದದೇ ಬದುಕಿನುದ್ದಕ್ಕೂ ಏನಾದರೂ ಸಾಧಿಸಬೇಕೆಂಬ ಛಲದಿಂದ ವ್ಯಾಸಂಗ ಮಾಡಬೇಕು ಎಂದರು.

ಸಮಾರಂಭದಲ್ಲಿ ಚಾಲಚಂದ್ರ ಹೊಸಕೋಟಿ, ಎಸ್. ಎಸ್. ಬಡ್ಡಿ, ಬಿ. ಎಂ. ಹಳೆಮನಿ, ಸಿ. ಬಿ. ತೆಳಗಿನಮನಿ, ಎಸ್. ವಿ. ಅಮ್ಮಲಜರಿ, ಎಸ್. ವಿ. ಗೋಲಬಾಂವಿ, ಪರಪ್ಪ ಬಿಳ್ಳೂರ, ಬಿ. ಎಂ. ಬರಗಿ, ವಿವೇಕಾನಂದ ಕ. ಭಸ್ಮೆ, ಎಂ. ಬಿ. ಬಾವಲತ್ತಿ, ಶಂಕರ ಕೆ. ಲೋಣಾರಿ, ಜಿ. ಟಿ. ಕೊಡತೆ, ಎನ್. ಎಂ. ಸೌದಾಗರ, ಎಂ. ಡಿ. ಜಮಖಂಡಿ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಅಮಿತ ಶಾ, ಸಿ.ಟಿ. ರವಿ ವಿರುದ್ಧ ಪ್ರತಿಭಟನೆ



**ರಬಕವಿ–ಬನಹಟ್ಟಿ :** ಸಂಸತ್ತಿನಲ್ಲಿ ಕೇಂದ್ರ ಗೃಹ ಸಚಿವ ಅಮಿತ ಶಹಾ ಡಾ. ಬಿ. ಆರ್. ಅಂಬೇಡ್ಕರ್ ವಿರುದ್ಧ ಮತ್ತು ವಿಧಾನ ಪರಿಷತ್ತಿನಲ್ಲಿ ಸಿ. ಟಿ. ರವಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ ವಿರುದ್ಧ ಹಗುರವಾಗಿ ಮಾತನಾಡಿದ್ದಾರೆಂದು ತೇರದಾಳ ಮತ ಕ್ಷೇತ್ರದ ಕಾಂಗ್ರೆಸ್ ಪಕ್ಷ ಇದನ್ನು ಖಂಡಿಸುತ್ತದೆ. ಕೂಡಲೇ ಗೃಹ ಸಚಿವರನ್ನು ಕೇಂದ್ರ ಸಚಿವ ಸಂಪುಟದಿಂದ ಕೈ ಬಿಡಬೇಕು ಮತ್ತು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿಯವರನ್ನು ಸದಸ್ಯತ್ವದಿಂದ ಅನರ್ಹಗೊಳಿಸಬೇಕು ಎಂದು ತೇರದಾಳ ಮತ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಮುಖಂಡ ಸಿದ್ದು ಕೊಣ್ಣೂರ ಆಗ್ರಹಿಸಿದರು.

ಅವರು ಮಂಗಳವಾರ ರಬಕವಿ ಬನಹಟ್ಟಿ ಸಮುದಾಯ ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ಪ್ರತಿಭಟನೆಯಲ್ಲಿ ತಹಶೀಲ್ದಾರ್ ಗಿರೀಶ ಸ್ವಾದಿಯವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದರು.

ಪಿಕೆಪಿಸ್ ಬ್ಯಾಂಕ್ ಅಧ್ಯಕ್ಷ ಭೀಮಶಿ ಮಗದುಮ್ ಮಾತನಾಡಿ, ಇವರಿಬ್ಬರ ಹೇಳಿಕೆಗಳಿಂದ ದೇಶದ ದಲಿತರಿಗೆ ಮತ್ತು ರಾಜ್ಯದ ಹೆಣ್ಣು ಮಕ್ಕಳಿಗೆ ಬಹಳಷ್ಟು ಅವಮಾನವಾಗಿದೆ. ಆದ್ದರಿಂದ ಶಹಾ ಮತ್ತು ರವಿಯವರು ತಮ್ಮ ಜವಾಬ್ದಾರಿಯುತ ಸ್ಥಾನಗಳಿಗೆ ರಾಜೀನಾಮೆಯನ್ನು ನೀಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಸವರಾಜ ಕೊಕಟನೂರ, ಪ್ರವೀಣ ಪೂಜಾರಿ, ಶಿವಲಿಂಗ ಗೊಂಬಿಗುಡ್ಡ, ಲಕ್ಷಣ ದೇಸಾರಟ್ಟಿ, ಮಲ್ಲಪ್ಪ ಸಿಂಗಾಡಿ ಮಾತನಾಡಿದರು.

ಶಿಲ್ಪಾ ರೋಡಕರ್, ಯಲ್ಲನಗೌಡ ಪಾಟೀಲ, ಡಾ. ಎ. ಆರ್. ಬೆಳಗಲಿ, ಹರ್ಷವರ್ಧನ ಪಟವರ್ಧನ, ರಾಹುಲ ಕಲಾಲ, ದೇವಲ ದೇಸಾಯಿ, ಅಶೋಕ ಆಳಗೊಂಡ, ನಿಲೇಶ ದೇಸಾಯಿ, ಅಶೋಕ ಉಳ್ಳಾಗಡ್ಡಿ, ವೆಂಕನಗೌಡ ಪಾಟೀಲ, ಸತ್ಯಪ್ಪ ಮಗದಮ್, ಶ್ರೀಶೈಲ ಮೇಣಿ, ಸಂಜು ಜೋತಾವರ, ಸಂಗೀತಾ ಖಾನಾಪುರ, ರೇಣುಕಾ ಮಡ್ಡಿಮನಿ, ಆಯೇಶಾ ಫಣಿಬಂದ್, ರಾಜೇಶ್ವರಿ ಕಾಂಬಳೆ, ವಿದ್ಯಾ ಬಿಳ್ಳೂರ, ಓಂಪ್ರಕಾಶ ಮನಗೂಳಿ ಸೇರಿದಂತೆ ತೇರದಾಳ ಮತಕ್ಷೇತ್ರದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

ಜಮಖಂಡಿ ಕುಡಚಿ ರಾಜ್ಯ ಹೆದ್ದಾರಿಯನ್ನು ತಡೆದು ಪ್ರತಿಭಟನೆಯನ್ನು ನಡೆಸಿದ್ದರಿಂದ ವಾಹನ ಸಂಚಾರಕ್ಕೆ ತೊಂದರೆಯಾಯಿತು. ಸಿಪಿಐ ಸಂಜೀವ ಬಳಗಾರ ಮತ್ತು ಪಿಎಸ್ಐ ಶಾಂತಾ ಹಳ್ಳಿ ಸೂಕ್ತ ಬಂದೋಬಸ್ತ ಏರ್ಪಡಿಸಿದ್ದರು.

## ಅಯ್ಯಪ್ಪಸ್ವಾಮಿಯ ಸಂಭ್ರಮದ ಮಹಾಪೂಜೆ



**ತೇರದಾಳ :** ಪಟ್ಟಣದ ಸಿದ್ಧೇಶ್ವರ ದೇವಸ್ಥಾನದಲ್ಲಿ ಮಕರಜ್ಯೋತಿ ಅಯ್ಯಪ್ಪಸ್ವಾಮಿ ಸೇವಾ ಸಂಘದ ಆಶ್ರಯದಲ್ಲಿ ಭಾನುವಾರ ಸಂಜೆ ಅಗ್ನಿಪೂಜೆ ಹಾಗೂ ಮಹಾಪೂಜೆ ಕಾರ್ಯಕ್ರಮ ಸಂಭ್ರಮ ಸಡಗರದಿಂದ ನೆರವೇರಿತು.

ಕಾರ್ಯಕ್ರಮದ ನಿಮಿತ್ಯ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಅಯ್ಯಪ್ಪ ಸ್ವಾಮಿ ಭಾವಚಿತ್ರ ಹಾಗೂ ಪಲ್ಲಕ್ಕಿ ಉತ್ಸವ ವಾದ್ಯ ಮೇಳಗಳೊಂದಿಗೆ ಜರುಗಿತು. ಸ್ವಾಮಿ ಮಾಲಾಧಾರಿಗಳು ದಾರಿಯುದ್ದಕ್ಕೂ ಭಕ್ತಿಯ ಹಾಡುಗಳಿಗೆ ಹೆಜ್ಜೆ ಹಾಕಿದರು. ಬಳಿಕ ನಡೆದ ಅಗ್ನಿಪೂಜೆಯಲ್ಲಿ ಹಲವು ಮಾಲಾಧಾರಿಗಳು, ಭಕ್ತರು ಅಗ್ನಿ ಪ್ರವೇಶ ಮಾಡಿ ಭಕ್ತಿಯ ಪರಾಕಾಷ್ಠೆಗೆ ಸಾಕ್ಷಿಯಾದರು. ಮುಗಳಖೋಡದ ಸದಾಶಿವ ರಗಟಿ ಗುರುಸ್ವಾಮಿ ನೇತೃತ್ವದಲ್ಲಿ ಮಹಾಪೂಜೆ ನಡೆಯಿತು. ಭಕ್ತಾಧಿಗಳಿಗೆ ಅನ್ನಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಮುಗಳಖೋಡ, ಹಂದಿಗುಂದ, ಸುಲ್ತಾನಪುರ, ಇಟ್ನಾಳ, ಸಸಾಲಟ್ಟಿ, ಚಿಮ್ಮಡ, ರಬಕವಿ, ಬನಹಟ್ಟಿ, ಜಗದಾಳ, ಹಿಡಕಲ್, ಹಳ್ಳೂರ, ಪಾಲಭಾಂವಿ ಸೇರಿದಂತೆ ವಿವಿಧ ಊರುಗಳಿಂದ ಅಯ್ಯಪ್ಪಸ್ವಾಮಿ ಭಕ್ತಾಧಿಗಳು ಹಾಗೂ ಮಾಲಾಧಾರಿಗಳು ಆಗಮಿಸಿದ್ದರು.

# ರಾಜ್ಯ ಮಟ್ಟಕ್ಕೆ ಆಯ್ಕೆ

**ರಬಕವಿ-ಬನಹಟ್ಟಿ** : ಭಾರತ ಚುನಾವಣಾ ಆಯೋಗ. ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಪಂಚಾಯತ ಬಾಗಲಕೋಟ ಇವರ ಆಶ್ರಯದಲ್ಲಿ ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ- 2025 ರ ಅಂಗವಾಗಿ ಬಾಗಲಕೋಟ ಜಿಲ್ಲಾ ಮಟ್ಟದ ಚಿತ್ರಕಲಾ,(ಭಿತ್ತಿ ಚಿತ್ರ ರಚನೆ) ಸ್ಪರ್ಧೆಯಲ್ಲಿ ಜಗದಾಳದ ಸರಕಾರಿ ಪ್ರೌಢಶಾಲೆಯ ಒಂಭತ್ತನೇ



ವರ್ಗದ ವಿದ್ಯಾರ್ಥಿನಿ ಸೃಷ್ಟಿ ಬಾಡಕರ ಚಿತ್ರಕಲೆಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಅವಳಿಗೆ ಮಾರ್ಗದರ್ಶನ ಮಾಡಿದ ಚಿತ್ರಕಲಾ ಶಿಕ್ಷಕರಾದ ಅಶೋಕ ಬಿ. ಮಾಂಗ ಹಾಗೂ ಶಾಲೆಯ ಎಲ್ಲ ಶಿಕ್ಷಕ ವೃಂದ ಮತ್ತು ಎಸ್. ಡಿ. ಎಂ. ಸಿ. ಅಧ್ಯಕ್ಷರು ಸರ್ವ ಸದಸ್ಯರು ಅವಳ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

# ಶೈಕ್ಷಣಿಕ ಪ್ರಗತಿಗೆ ವಿದ್ಯಾರ್ಥಿ ವೇತನ ಯೋಜನೆ: ಪ್ರವೇಶಕ್ಕೆ ಕಿರು ಪರೀಕ್ಷೆ ಬರೆದ 1000 ವಿದ್ಯಾರ್ಥಿಗಳು



**ಕಾರಟಗಿ ರವಿನಗರ್** : ಪ್ರಸ್ತುತ ಸಾಲಿನಿಂದ ಕಮ್ಮಾವಾರಿ ಶಿಕ್ಷಣ ಸಂಸ್ಥೆಯಲ್ಲಿ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ವಿದ್ಯಾರ್ಥಿ ವೇತನ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಲ್ಲಿ ಸಂಸ್ಥೆಯಿಂದ ರೂ.50 ಲಕ್ಷ ಮೀಸಲಿಡಲಾಗಿದೆ. ರವಿವಾರ ಬೆಳಗ್ಗೆ 10 ಗಂಟೆಗೆ ಕಮ್ಮವಾರಿ ಶಿಕ್ಷಣ ಸಂಸ್ಥೆ ರೆಡ್ಡಿ ವೀರಣ್ಣ ಸಂಜೀವಪ್ಪ ವಸತಿ ಶಾಲೆಯಲ್ಲಿ 10ನೇ ತರಗತಿ ವಿದ್ಯಾರ್ಥಿಗಳು ಪಿಯುಸಿ ವಿಜ್ಞಾನ ವಿಭಾಗದಲ್ಲಿ ಪ್ರವೇಶ ಪಡೆಯುಲು ಪ್ರತಿಭಾವಂತ,ಬಡ ವಿದ್ಯಾರ್ಥಿಗಳಿಗೆ 50 ಲಕ್ಷ ರೂ.ಮೀಸಲು ಪ್ರವೇಶಕ್ಕೆ ಕಿರು ಪರೀಕ್ಷೆ ಜರುಗಿದವು. ಪರೀಕ್ಷೆಯಲ್ಲಿ ಶ್ರೀ ರಾಮನಗರ ಕೆಸರಹಟ್ಟಿ ಸಿದ್ದಾಪುರ್ ಕಾರಟಗಿ ಗಂಗಾವತಿ ಸಿಂಧನೂರು ತಾಲೂಕಿನ ಹಾಗೂ ಸುತ್ತಮುತ್ತಲಿನ ಗ್ರಾಮದ ಒಂದು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಪರೀಕ್ಷೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಕೊಲ್ಲಾ ಶೇಷಗಿರಿರಾವ್ ಮಾತನಾಡಿ ನಮ್ಮ ಸಂಸ್ಥೆಯ ರೆಡ್ಡಿ ವೀರಣ್ಣ ಸಂಜೀವಪ್ಪ ಶಾಲೆ ಮತ್ತು ಕಾಲೇಜ್ ಗ್ರಾಮೀಣ ವಿದ್ಯಾರ್ಥಿಗಳ ಪ್ರಗತಿಯಲ್ಲಿ ವಿಶೇಷ ಪಾತ್ರ ವಹಿಸಿದೆ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಮತ್ತು ಶಿಕ್ಷಣಕ್ಕೆ ಮಹತ್ವ ಕೊಡಬೇಕೆಂಬ ಭಾವನೆ ಮೂಡಿಸಲು ಸ್ಕಾಲರ್ ಶಿಪ್ ಯೋಜನೆ ಜಾರಿಗೊಳಿಸಿದ್ದೇವೆ. ಪಟ್ಟಣ ಸೇರಿದಂತೆ ಕಾರಟಗಿ, ಕನಕಗಿರಿ ಮತ್ತು ಗಂಗಾವತಿ ತಾಲೂಕಿನ ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಪ್ರಗತಿ ಹೆಚ್ಚಿಸುವಲ್ಲಿ ನಮ್ಮ ಸಂಸ್ಥೆ ಸದಾ ಶ್ರಮಿಸುತ್ತಿದೆ. 28ನೇ ವರ್ಷದಲ್ಲಿ ಪಾದಾರ್ಪಣೆ ಮಾಡಿರುವ ನಮ್ಮ ಶಿಕ್ಷಣ ಸಂಸ್ಥೆ ವಿಶೇಷವಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ಪಡೆದುಕೊಳ್ಳುವ ಅವಕಾಶ ನೀಡುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಆಡಳಿತ ಅಧಿಕಾರಿ ಶ್ರೀಮನ್ ನಾರಾಯಣ, ಪ್ರಾಚಾರ್ಯರು ಕೆಎಸ್ ಗುರುಮಠ, ಉಪ ಪ್ರಾಚಾರ್ಯರು ವಸಂತ ದೇಸಾಯಿ, ಡಾ ಎಮ್ ಡಿ ರಫೀಕ್ ಖಾನ್, ಬಾಲ ಗುರುಕುಲ ಮುಖ್ಯಸ್ಥರು ಶ್ರೀದೇವಿ ಕೊಲ್ಲಾ ಶಿಕ್ಷಕ ವೃಂದ,ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಾಲಕರು ಉಪಸ್ಥಿತರಿದ್ದರು.

# ಪಂಪಾ ನದಿಯಲ್ಲಿ ಮುಳುಗಬೇಕಿದ್ದವನು ಟೆಸ್ಟ್ ತ್ರಿಶತಕ ಬಾರಿಸಿದ ಕಥೆ..!

**ಆ ಐತಿಹಾಸಿಕ ಕ್ಷಣಕ್ಕೆ 8 ವರ್ಷ ತುಂಬಿದೆ ಇವತ್ತು.**
**ಕರುಣ್ ನಾಯರ್ ಎಂಬ ಹುಡುಗ**
**ಆ ದಿನ ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇತಿಹಾಸ ನಿರ್ಮಿಸಿದ್ದ.**
**2016**

ಅದೇ ಮೊದಲ ಬಾರಿ ಭಾರತ ತಂಡಕ್ಕೆ ಆಯ್ಕೆಯಾಗಿದ್ದ ಕರುಣ್ ನಾಯರ್ ಜಿಂಬಾಬ್ವೆ ಪ್ರವಾಸಕ್ಕೆ ತೆರಳುವ ಮುನ್ನ ಮನೆ ದೇವರ ದರ್ಶನಕ್ಕೆಂದು ಕೇರಳಕ್ಕೆ ಹೋಗಿದ್ದ. ಆ ದೇವಸ್ಥಾನದಲ್ಲಿ ಅವತ್ತು ದೇವರ ಹಬ್ಬ. ಪಂಪಾ ನದಿಯಲ್ಲಿ ನೂರಾರು ಜನರನ್ನು ಹೊತ್ತು ಸಾಗುತ್ತಿದ್ದ ಆ ದೋಣಿಯಲ್ಲಿದ್ದ ಕರುಣ್ ನಾಯರ್.. ದಡ ಸೇರಲು ಇನ್ನೇನು ಕೆಲವೇ ಅಡಿಗಳಷ್ಟೇ ಬಾಕಿ. ಭಾರವನ್ನು ತಾಳಲಾಗದ ದೋಣಿ ನೀರಿನ ಮಧ್ಯೆ ಮಗುಚಿ ಬಿದ್ದಿತ್ತು. ದೋಣಿಯಲ್ಲಿದ್ದವರ ಜೊತೆ ಕರುಣ್ ನಾಯರ್ ಕೂಡ ನೀರಿನಲ್ಲಿ ಬಿದ್ದಿದ್ದ. ಈಜಿ ದಡ ಸೇರಲು ಸಾಧ್ಯವಾಗದ ಪರಿಸ್ಥಿತಿ. ಸ್ಥಳೀಯರಿಬ್ಬರು ದೇವರಂತೆ ಬಂದು ಕಾಪಾಡಿದ್ದರು. ಹುಡುಗ ಪುನರ್ಜನ್ಮ ಪಡೆದು ಬಂದಿದ್ದ. ಇದಾಗಿ ಐದು ತಿಂಗಳ ನಂತರ ಕರುಣ್ ನಾಯರ್ ಚೆನ್ನೈನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ತನ್ನ ಕ್ರಿಕೆಟ್ ಬದುಕಿನ ಅತೀ ದೊಡ್ಡ ಸಾಧನೆ ಮಾಡಿ ನಿಂತಿದ್ದ. ಟೆಸ್ಟ್ ಕ್ರಿಕೆಟ್'ನಲ್ಲಿ ತ್ರಿಶತಕ.



ನಝೂಫ್ ಗಢದ ನವಾಬನನ್ನು ಬಿಟ್ಟರೆ ಈ ಸಾಧನೆ ಮಾಡಿದ ಒಬ್ಬನೇ ಒಬ್ಬ ಭಾರತೀಯನಿದ್ದರೆ ಅದು ಕರುಣ್ ನಾಯರ್. ಸುನೀಲ್ ಗವಾಸ್ಕರ್, ಸಚಿನ್ ತೆಂಡೂಲ್ಕರ್, ರಾಹುಲ್ ದ್ರಾವಿಡ್'ರಂತಹ ದಿಗ್ಗಜರ ಕೈಯಲ್ಲಿ ಸಾಧ್ಯವಾಗದ ಸಾಧನೆಯನ್ನು ಮಾಡಿ ತೋರಿಸಿದ್ದ ಕರುಣ್.

ಟೆಸ್ಟ್ ಕ್ರಿಕೆಟ್'ನಲ್ಲಿ ತ್ರಿಶತಕ ಬಾರಿಸುವುದೆಂದರೆ ಅದೇನು ಹುಡುಗಾಟವಲ್ಲ.. ಅದೊಂದು ಅದ್ಭುತ ಸಾಧನೆ. ಅಂತಹ ಸಾಧನೆಗಳೇ ಕ್ರಿಕೆಟಿಗರ ಭವಿಷ್ಯಕ್ಕೆ ಅಡಿಪಾಯ. ಆದರೆ ಕರುಣ್ ನಾಯರ್ ವಿಚಾರದಲ್ಲಿ ಹಾಗಾಗಲಿಲ್ಲ. ಕರುಣ್ ಟೆಸ್ಟ್ ತ್ರಿಶತಕ ಬಾರಿಸಿದ ನಂತರ ಭಾರತ ತಂಡ ಇಲ್ಲಿವರೆಗೆ 80 ಟೆಸ್ಟ್ ಪಂದ್ಯಗಳನ್ನಾಡಿದೆ. 80 ಟೆಸ್ಟ್ ಪಂದ್ಯಗಳೆಂದರೆ ಕನಿಷ್ಠ 120 ಇನ್ನಿಂಗ್ಸ್'ಗಳಾದರೂ ಇರಬಹುದು. ಇದರಲ್ಲಿ ವಿಪರ್ಯಾಸ ಏನು ಗೊತ್ತೇ..? ಆ 80 ಟೆಸ್ಟ್ ಪಂದ್ಯಗಳಲ್ಲಿ ಕರುಣ್ ನಾಯರ್'ಗೆ ಸಿಕ್ಕಿರುವ ಅವಕಾಶ ಕೇವಲ ನಾಲ್ಕು ಇನ್ನಿಂಗ್ಸ್. ಅದು ಅವನ ದುರದೃಷ್ಟವೋ.. ಅವನೇ ನತದೃಷ್ಟನೋ ಗೊತ್ತಿಲ್ಲ.

"300 ಹೊಡೆದಿದ್ದಕ್ಕೂ ಬೆಲೆ ಇಲ್ವಲ್ಲಾ" ಎಂದು ಕರುಣ್ ನಾಯರ್ ಒಮ್ಮೆ ಹೇಳಿದ್ದಿದೆ. ಚೆನ್ನೈನಲ್ಲಿ ಕರುಣ್ ನಾಯರ್ ಆ ತ್ರಿಶತಕ ಹೊಡೆದು ಇವತ್ತಿಗೆ ಭರ್ತಿ ಎಂಟು ವರ್ಷ. ಆ ಎಂಟು ವರ್ಷಗಳಲ್ಲಿ ಕರುಣ್ ನಾಯರ್ ಬದುಕಲ್ಲಿ ಸಾಕಷ್ಟು ಏರಿಳಿತಗಳು ನಡೆದು ಹೋಗಿವೆ. ಭಾರತ ತಂಡದಲ್ಲಿ ಮತ್ತೆ ಅವಕಾಶ ಸಿಗಲಿಲ್ಲ, ಅದು ಬೇರೆ ಮಾತು.. ಕರ್ನಾಟಕ ತಂಡದಲ್ಲೇ ಕರುಣ್ ನಾಯರ್ ಸ್ಥಾನ ಕಳೆದುಕೊಂಡು ಬಿಟ್ಟ. ಅವಕಾಶ ಅರಸಿ ಹೊರಟವನ ಕೈ ಹಿಡಿದದ್ದು ವಿದರ್ಭ ಕ್ರಿಕೆಟ್ ಸಂಸ್ಥೆ. 2023-24 ರ ರಣಜಿ ಟೂರ್ನಿಯಲ್ಲಿ 690 ರನ್ ಗಳಿಸಿ ವಿದರ್ಭ ತಂಡವನ್ನು ಫೈನಲ್'ಗೆ ಮುನ್ನಡೆಸಿದ್ದ ಕರುಣ್.

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ 2015 ರ ರಣಜಿ ಟ್ರೋಫಿ ಫೈನಲ್ ಪಂದ್ಯದಲ್ಲಿ ತಮಿಳುನಾಡು ವಿರುದ್ಧ ಕರುಣ್ ನಾಯರ್ ಬಾರಿಸಿದ ಆ ತ್ರಿಶತಕ ಇನ್ನೂ ಕಣ್ಣಿಗೆ ಕಟ್ಟಿದ ಹಾಗಿದೆ. ಅದಕ್ಕಿಂತಲೂ ನನಗೆ ಖುಷಿ ನೀಡಿದ್ದು 2013 ರ ರಣಜಿ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಉತ್ತರ ಪ್ರದೇಶ ವಿರುದ್ಧ ಕರುಣ್ ಗಳಿಸಿದ್ದ ಆ ಶತಕ.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯ. ಬ್ಯಾಟಿಂಗ್ ಆರಂಭಿಸಿದ ಕರ್ನಾಟಕ ಹದಿನೈದು ರನ್ನಿಗೆ ಮೂರು ವಿಕೆಟ್ ಕಳೆದುಕೊಂಡಿತ್ತು. ರಾಹುಲ್, ಸಮರ್ಥ್, ಮನೀಶ್ ಸೊನ್ನೆ ಸುತ್ತಿದ್ದರು. ಆ ಕಡೆ ರಾಬಿನ್ ಉತ್ತಪ್ಪ. ಐದನೇ ಕ್ರಮಾಂಕದಲ್ಲಿ ಕ್ರೀಸ್ ಗಿಳಿದ ಕರುಣ್ ನಾಯರ್, ಉತ್ತಪ್ಪ ಜೊತೆ ಶತಕದ ಜೊತೆಯಾಟವಾಡಿದ್ದಷ್ಟೇ ಅಲ್ಲ, ಅಮೋಘ ಶತಕವನ್ನೂ ಬಾರಿಸಿ ಬಿಟ್ಟಿದ್ದ.

ಟೆಸ್ಟ್ ಕ್ರಿಕೆಟ್'ನಲ್ಲಿ ಬಾರಿಸಿದ ತ್ರಿಶತಕ ಕರುಣ್ ನಾಯರ್ ವೃತ್ತಿ ಬದುಕಿಗೆ ತಿರುವು ನೀಡಬೇಕಿತ್ತು. ಆದರೆ, ಅವನ ಕ್ರಿಕೆಟ್ ಬದುಕೇ ತಿರುವು ಪಡೆದುಕೊಂಡು ಬಿಟ್ಟಿತ್ತು. ಕರುಣ್ ನಾಯರ್'ಗೆ ಈಗ 33 ವರ್ಷ ವಯಸ್ಸು. ಮತ್ತೆ ಭಾರತ ಪರ ಟೆಸ್ಟ್ ಆಡುವ ಆಸೆಯಿದೆ ಅವನಿಗೆ. ಯಾರಿಗೆ ಗೊತ್ತು, ಅವನ ಹಣೆಬರಹ..? ಸಮಯ ಸರಿಯುತ್ತದೆ... ಹೊತ್ತು ಮುಳುಗುತ್ತದೆ... ಸೂರ್ಯ ಮತ್ತೊಮ್ಮೆ ನೆತ್ತಿ ಮೇಲೆ ಬೆಳಕು ಚೆಲ್ಲಲೇಬೇಕಲ್ಲವೇ..?

**-ಸುದರ್ಶನ್**

# ಲೋಕಾಪುರ: ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮಕ್ಕೆ ಚಾಲನೆ

**ಲೋಕಾಪುರ** : ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ರೂಪಿಸಿರುವ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮಕ್ಕೆ ಉತ್ತಮ ಸ್ಪಂದನೆ ದೊರೆಯುತ್ತಿದ್ದು, ಇದರ ಯಶಸ್ವಿ ಅನುಷ್ಠಾನಕ್ಕೆ ವ್ಯಾಪಕ ಪ್ರಚಾರ ಮತ್ತು ಅನುಸರಣಾ ಕಾರ್ಯರೂಢಿಸಲಾಗುತ್ತಿದೆ ಎಂದು ಬಸವೇಶ್ವರ ಪ್ರೌಢ ಶಾಲೆ ಮುಖ್ಯ ಗುರು ಎ.ಡಿ.ಸಂಗನ್ನವರ ಹೇಳಿದರು.

ಸಮೀಪದ ದಾದನಟ್ಟಿ ಗ್ರಾಮದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥ ಗ್ರಾಮೀಣಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಲೋಕಾಪುರ ವಲಯದ ವತಿಯಿಂದ ಹಮ್ಮಿಕೊಂಡ ಸ್ವಾಸ್ಥ್ಯ ಸಂಕಲ್ಪ ಯೋಜನೆಯ ಉದ್ಘಾಟಕರಾಗಿ ಮಾತನಾಡಿದ ಅವರು ವಿದ್ಯಾರ್ಥಿಗಳು ಕುಟುಂಬದ ಕಣ್ಮಣಿಗಳಾಗಿದ್ದು ಪೋಷಕರ ಅಭಿಲಾಷೆಯಂತೆ ಅವರು ವಿದ್ಯಾಭ್ಯಾಸದಲ್ಲಿ ತೊಡಗಿ ಪ್ರಗತಿ ಸಾಧಿಸಬೇಕು,



ವಿದ್ಯಾರ್ಥಿಗಳು ತಮ್ಮ ಆರೋಗ್ಯ ಪಾಲನೆಗೆ ಹಲವು ಮೂಲ ತಿಳುವಳಿಕೆಗಳನ್ನು ಗಳಿಸುವ ಅಗತ್ಯವಿದೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ ವಿಜ್ಞಾನ ಶಿಕ್ಷಕ ಎಸ್. ಆರ್.ಯಾದವಾಡ ಮಾತನಾಡಿ ಮದ್ಯವ್ಯಸನ, ಗುಟ್ಕಾ, ಧೂಮಪಾನಗಳಿಂದ ಯುವ ಜನತೆಯ ಜೀವನ ಹಾಳಾಗುತ್ತಿದೆ, ಸಹವಾಸ ದೋಷ, ಆಕಸ್ಮಿಕ ಆಕರ್ಷಣೆಗಳ ಕಾರಣ ದುಶ್ಚಟ ಒಮ್ಮೆ ಆರಂಭವಾದರೆ ಬದುಕು ವಿನಾಶ ಹಾದಿಯಲ್ಲಿ ಸಾಗುತ್ತದೆ,

ಇದರಿಂದ ವೈಯಕ್ತಿಕ ಜೀವನದ ಜೊತೆ ಜೊತೆಗೆ ಸಮಾಜದ ಸ್ವಾಸ್ಥ್ಯ ಸಹ ಹಾಳಾಗುತ್ತದೆ, ಉತ್ತಮ ಹವ್ಯಾಸಗಳನ್ನು ಮೈಗೂಡಿಸಿಕೊಂಡು ಆನಂದಮಯ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಉಪಸ್ಥಿತಿಯಲ್ಲಿ ಶ್ರೀಮತಿ ಉಮಾ ಮಾನೆ, ಸಂಘದ ಮೇಲ್ವಿಚಾರಕಿಯರಾದ ಸಾವಿತ್ರಿ ತುಪ್ಪದ, ಸೇವಾ ಪ್ರತಿನಿಧಿ ಎಲ್.ಬಿ.ಕುಂದರಗಿ, ಎಚ್.ಜಿ.ನಾವಲಗಿ, ಎ.ಎಂ. ಹುಲಗನ್ನವರ ಗ್ರಾಮಸ್ಥರು ಹಾಗೂ ಶ್ರೀ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸದಸ್ಯರು ಇದ್ದರು.

# ಉಚಿತ ಕೌಶಲ್ಯಾಧಾರಿತ ತರಬೇತಿಗೆ ಅರ್ಜಿ ಆಹ್ವಾನ

**ಕೊಪ್ಪಳ** : ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಜನವರಿ 16 ರಿಂದ 10 ದಿನಗಳ ತರಕಾರಿ ಬೆಳೆಗಳ ನರ್ಸರಿ ತರಬೇತಿ ಮತ್ತು ಫೆಬ್ರವರಿ 03 ರಿಂದ 13 ದಿನಗಳ ವಾಣಿಜ್ಯ ತೋಟಗಾರಿಕೆ ಉಚಿತ ತರಬೇತಿಗಳು ಆರಂಭವಾಗಲಿದ್ದು, ತರಬೇತಿ ಅವಧಿಯಲ್ಲಿ ಊಟ ಹಾಗೂ ವಸತಿಯು ಉಚಿತವಾಗಿರುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಜನವರಿ 14 ಕೊನೆಯ ದಿನವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿಂಗ್ ನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಯನ್ನು ಉಚಿತವಾಗಿ ನೀಡಲಾಗುವುದು. ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ, ದೂ.ಸಂ : 9980510717 , 9483485489 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ಭಾಗ್ಯನಗರದಲ್ಲಿ ರಾಷ್ಟ್ರೀಯ ಗಣಿತ ದಿನಾಚರಣೆ



**ಕೊಪ್ಪಳ** : ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಭಾರತೀಯ ವಿಜ್ಞಾನ ಸಂಸ್ಥೆ ಆವರಣ, ಬೆಂಗಳೂರು ಹಾಗೂ ಜಿಲ್ಲಾ ಪಂಚಾಯತಿ, ಕೊಪ್ಪಳ ರವರ ಸಹಯೋಗದೊಂದಿಗೆ ಸೋಮವಾರ ಭಾಗ್ಯನಗರದ ಸರಕಾರಿ ಪದವಿಪೂರ್ವ ಕಾಲೇಜಿನ ಪ್ರೌಢಶಾಲೆ ವಿಭಾಗದಲ್ಲಿ ಗಣಿತ ಶಾಸ್ತ್ರಜ್ಞ ಶ್ರೀನಿವಾಸ ರಾಮಾನುಜನ್ ಅವರ ಜನ್ಮದಿನ ಪ್ರಯುಕ್ತ ಗಣಿತ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಂಜುನಾಥ ಡಿ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಶಾಲಾ ಮಕ್ಕಳನ್ನು ಉದ್ದೇಶಿಸಿ ಮಾತನಾಡಿ, ಗಣಿತ ಕಲಿಕೆಯಿಂದ ಮಕ್ಕಳು ವೈಜ್ಞಾನಿಕವಾಗಿ ಬೆಳೆಯಲು ಪ್ರಮುಖ ಪಾತ್ರವಹಿಸುತ್ತದೆ. ಎಂದು ತಿಳಿಸಿದರು.

ಕಾರ್ಯಕ್ರಮದ ನಿಮಿತ್ತ ಸಂಪನ್ಮೂಲ ವ್ಯಕ್ತಿಗಳಾಗಿ ಗಿಣಿಗೇರದ ಮುಖ್ಯ ಶಿಕ್ಷಕರು ಸದಾನಂದ ಕುಮಾರ ಮತ್ತು ಭಾನಾಪುರ್ ಗಣಿತ ಶಿಕ್ಷಕ ಕಾಶಿ ವಿಶ್ವನಾಥ್ ಅವರು ಶಾಲಾ ಮಕ್ಕಳಿಗೆ ಗಣಿತ ವಿಷಯಕ್ಕೆ ಸಂಬಂಧಿಸಿದಂತೆ ಅತ್ಯಂತ ಸುಲಭ ಹಾಗೂ ಸರಳ ವಿಧಾನದಲ್ಲಿ ಭೋದನೆ ಮಾಡಿದರು.

ಈ ಸಂದರ್ಭದಲ್ಲಿ ಡಯಟ್‌ನ ಉಪನ್ಯಾಸಕರು ಹಾಗೂ ಶಾಲಾ ಉಪ ಪ್ರಾಂಶುಪಾಲರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಜಿಲ್ಲಾ ಎನ್.ಆರ್.ಡಿ.ಎಮ್. ಎಸ್. ಕೇಂದ್ರದ ಗುರುಸ್ವಾಮಿ ಪಿ ಸೇರಿದಂತೆ ಮತ್ತಿತರರಿದ್ದರು. ಶಿಕ್ಷಕ ಮಂಜುನಾಥ ತಿಮ್ಮಕ್ಕನವರ್ ಕಾರ್ಯಕ್ರಮ ನಿರೂಪಿಸಿದರು. ಎಲ್ಲಾ ಶಿಕ್ಷಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಕೊಪ್ಪಳ ಗವಿಶ್ರೀ ಕ್ರೀಡಾ ಉತ್ಸವ ಹಮ್ಮಿಕೊಳ್ಳಲಾಗುತ್ತಿದೆ: ಸಂಸದ ಕೆ. ರಾಜಶೇಖರ ಬಸವರಾಜ ಹಿಟ್ನಾಳ

**ಕೊಪ್ಪಳ** : ಜನವರಿಯಲ್ಲಿ ನಡೆಯಲಿರುವ ಗವಿಶ್ರೀ ಜಾತ್ರೆಯ ನಿಮಿತ್ಯ ಕೊಪ್ಪಳ ನಗರದಲ್ಲಿ ಗವಿಶ್ರೀ ಕ್ರೀಡಾ ಉತ್ಸವ-2025 ನ್ನು ಹಮ್ಮಿಕೊಳ್ಳಲಾಗಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.



ಅವರು ಮಂಗಳವಾರ ಗವಿಶ್ರೀ ಕ್ರೀಡಾ ಉತ್ಸವ-2025 ಕುರಿತು ಮಾಹಿತಿ ನೀಡಲು ಕೊಪ್ಪಳ ನಗರದ ಪ್ರವಾಸಿ ಮಂದಿರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಕೊಪ್ಪಳ ಜಿಲ್ಲೆಯಲ್ಲಿ ಐತಿಹಾಸಿಕವಾಗಿ ಧಾರ್ಮಿಕವಾಗಿ ಹಾಗೂ ಭಕ್ತಿಯಿಂದ ಜಿಲ್ಲೆ, ರಾಜ್ಯ, ವಿದೇಶಗಳಿಂದಲೂ ಕೂಡ ಭಕ್ತರು ಆಗಮಿಸಿ ನೇರವೇರಿಸುವ ಅಂದಾಜ 25 ಲಕ್ಷಅಧಿಕಭಕ್ತಾದಿಗಳು,ಜನರುಸೇರುವಂತಹಗವಿಶ್ರೀ ಜಾತ್ರಮಹೋತ್ಸವಅಂಗವಾಗಿರಾಜ್ಯದಮಹಾಜನರು, ಯುವಜನರು,ಮಹಿಳೆಯರು,ರೈತರು,ಮಕ್ಕಳು,ಎಲ್ಲಾ ವರ್ಗದವರುಕೂಡಸೇರಿಕೊಂಡುಜಾನಪದಶೈಲಿಯ ಹಾಗೂ ಪ್ರಸ್ತುತ ಪ್ರಚಲಿತವಿರುವ ಆಟಗಳನ್ನು ಸೇರಿಸಿ ಜಾತ್ರಾ ನಿಮಿತ್ಯ ಗವಿಶ್ರೀ ಕ್ರೀಡಾ ಉತ್ಸವ-2025ನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ಕ್ರೀಡಾಕೂಟವನ್ನು ಕೊಪ್ಪಳ ಗವಿಮಠ, ಕೊಪ್ಪಳ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ಕೈಗಾರಿಕೆಗಳು ಹಾಗೂ ವಾಣಿಜ್ಯೋದ್ಯಮಿಗಳ ಸಹಕಾರದಿಂದ ಹಾಗೂ ಜಿಲ್ಲಾ ಅಥ್ಲೆಟಿಕ್ಸ್ ಅಸೋಶಿಯೇಶನ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೊಪ್ಪಳ ಕುಸ್ತಿ ಸಂಘ, ಬ್ಯಾಡ್ಮಿಂಟನ್ ಅಸೋಶಿಯೇಶನ್, ಕಬಡ್ಡಿ ಹಾಗೂ ವಾಲಿಬಾಲ್ ಅಸೋಶಿಯೇಶನ್ ಮತ್ತು ಹಲವಾರು ಸಂಘ ಸಂಸ್ಥೆಗಳನ್ನ ಒಳಗೊಂಡು ಎಲ್ಲಾ ವರ್ಗದವರು ಮುಕ್ತವಾಗಿ ಭಾಗವಹಿಸುವ ಹಾಗೇ ಗವಿಶ್ರೀಕ್ರೀಡಾಕೂಟ-2025ನ್ನುಆಯೋಜಿಸಲಾಗಿದೆ. ಈ ಕ್ರೀಡಾಕೂಟದಲ್ಲಿ 17 ವಿವಿಧ ರೀತಿಯ ಕ್ರೀಡೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಪುರುಷ ಮತ್ತು ಮಹಿಳೆಯರಿಗೆ ಮುಕ್ತ ವಾಲಿಬಾಲ್, ಕಬಡ್ಡಿ,ಮ್ಯಾರಾಥಾನ,ಶೆಟಲ್‌ಬ್ಯಾಡ್ಮಿಂಟನ್,ಛದ್ಮವೇಷ, ದೇಹದಾರ್ಢ್ಯ, ಪಂದ್ಯಾವಳಿ ಏರ್ಪಡಿಸಲಾಗಿದೆ. ಪುರುಷರ ಆಹ್ವಾನಿತ ಕ್ರೀಡೆಗಳಾಗಿ ಕ್ರಿಕೆಟ್, ಗಾಳಿಪಟ, ಮಲ್ಲಕಂಬ, ಕುಸ್ತಿ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗುತ್ತಿದೆ.ಪುರುಷರಿಗಾಗಿಜಿಲ್ಲಾಮಟ್ಟದಲ್ಲಿ ಎತ್ತಿನ ಬಂಡಿ ಶೃಂಗಾರ ಸ್ಪರ್ಧೆ, ಯುವಕರಿಂದ ಎತ್ತಿನ ಬಂಡಿ ಜಗ್ಗುವದು, ಸಂಗ್ರಾಣಿ ಕಲ್ಲು ಎತ್ತುವದು ಮತ್ತು ವಿಕಲಚೇತನರ ವಾಲಿಬಾಲ್ ಪಂದ್ಯಾವಳಿ. ಪುರುಷರ ಹಾಗೂ ಮಹಿಳೆಯರಿಗಾಗಿ ಜಿಲ್ಲಾ ಮಟ್ಟದಲ್ಲಿ ಹಗ್ಗ ಜಗ್ಗಾಟ ಸ್ಪರ್ಧೆ, ಮಹಿಳೆಯರಿಗೆ ಜಿಲ್ಲಾ ಮಟ್ಟದ ರಂಗೋಲಿ ಹಾಗೂ ಥ್ರೋಬಾಲ್ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದರು.

ಪ್ರಪ್ರಥಮ ಬಾರಿಗೆ ಜಿಲ್ಲೆಯಲ್ಲಿ ಗಾಳಿಪಟ ಉತ್ಸವನ್ನು ಹಮ್ಮಿಕೊಳ್ಳಲಾಗಿದ್ದು,ಕರ್ನಾಟಕ,ಮಹಾರಾಷ್ಟ್ರ,ಕೇರಳ ಮತ್ತು ಹರಿಯಾಣದಿಂದಲೂ ಅನುಭವಿ ನುರಿತ ತಂಡಗಳು ಗವಿಶ್ರೀ ಮೈದಾನದಲ್ಲಿ ಸುಮಾರು 100ಕ್ಕೂ ಅಧಿಕಗಾಳಿಪಟಗಳಪ್ರದರ್ಶನವನ್ನು2025ರಜನವರಿ 16 ರಂದು ನಡೆಸಲಿದ್ದಾರೆ. ಮಕ್ಕಳು ಯುವಕರಿಗೆ ಸ್ಫೂರ್ತಿ ತುಂಬುವಂತೆ ಮಕರ ಸಂಕ್ರಾತಿಯ ವಿಶೇಷವಾಗಿಯೆ ಬೃಹತ್ ಪ್ರಮಾಣದ ಗಾಳಿಪಟ ಉತ್ಸವವನ್ನುಆಯೋಜಿಸಲಾಗಿದೆಎಂದುಹೇಳಿದರು.

ಜನವರಿ 14 ರಂದು ಸಂಜೆ 3.30 ಗಂಟೆಗೆ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆಯನ್ನು ಗವಿಮಠ ಆವರಣದಲ್ಲಿ ಆಯೋಜಿಸಲಾಗಿದೆ. ಗವಿಶ್ರೀ ಕ್ರೀಡಾಕೂಟದಲ್ಲಿರೈತರನ್ನುಗಮನದಲ್ಲಿಇಟ್ಟುಕೊಂಡು ರೈತರ ಜೀವನ ಅವಿಭಾಜ್ಯ ಅಂಗವಾದ ಎತ್ತು, ಚಕ್ಕಡಿ, ಇವುಗಳ ಅಲಂಕಾರದ ಸ್ಪರ್ಧೆಯನ್ನು ಜನವರಿ 17 ರಂದು ನಗರದ ತಾಲ್ಲೂಕ ಕ್ರೀಡಾಂಗಣದಿಂದ ಗವಿಮಠದವರೆಗೆ ನಡೆಯಲಿದೆ. ಅದರಂತೆ, ರೈತ ಮಕ್ಕಳುಮತ್ತುಯುವಜನರಿಗಾಗಿಎತ್ತಿನಬಂಡಿಜಗ್ಗುವ ಸ್ಪರ್ಧೆಯನ್ನು ಸಹ ಏರ್ಪಡಿಸಲಾಗಿದೆ ಎಂದರು.

**ಸ್ಪರ್ಧೆಗಳ ವಿವರ** : ಗವಿಶ್ರೀ ಕ್ರೀಡಾ ಉತ್ಸವ-2025ರ ನಿಮಿತ್ತ ಜನವರಿ 14 ರಂದು ನಗರದ ತಾಲ್ಲೂಕು ಕ್ರೀಡಾಂಗಣದಲ್ಲಿ ಪುರುಷ ಹಾಗೂ ಮಹಿಳೆಯರಿಗಾಗಿ ಮ್ಯಾರಥಾನ್ ಸ್ಪರ್ಧೆ ಮತ್ತು ಗವಿಮಠ ಆವರಣದಲ್ಲಿ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ಜ. 15 ರಂದು ಗವಿಮಠದ ಆವರಣದಲ್ಲಿ ವಿಶೇಷಚೇತನ ಮಕ್ಕಳಿಂದ ಮಲ್ಲಕಂಬ ಪ್ರದರ್ಶನ ಮತ್ತು ಯುವಕರಿಂದ ಎತ್ತಿನ ಬಂಡಿ ಜಗ್ಗುವ ಸ್ಪರ್ಧೆಗಳು ಇರಲಿವೆ. ಜ. 16 ರಂದು ಗವಿಮಠದ ಆವರಣದಲ್ಲಿ ಕುಸ್ತಿ ಸ್ಪರ್ಧೆ ಮತ್ತು ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಶೆಟಲ್ ಬ್ಯಾಡ್ಮಿಂಟನ್ (ಡಬಲ್ಸ್) ಸ್ಪರ್ಧೆ, ಹಗ್ಗ-ಜಗ್ಗಾಟ, ಗಾಳಿಪಟ ಉತ್ಸವ ಮತ್ತು ತಾಲ್ಲೂಕು ಕ್ರೀಡಾಂಗಣದಲ್ಲಿ ಬಾಲಿಬಾಲ್, ವಿಕಲಚೇತನರ ಬಾಲಿಬಾಲ್, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಕಬಡ್ಡಿ, ಛದ್ಮವೇಷ ಸ್ಪರ್ಧೆ, ಪುರುಷರಿಗಾಗಿ ದೇಹದಾರ್ಢ್ಯತೆ ಸ್ಪರ್ಧೆ ಹಾಗೂ ಕ್ರಿಕೆಟ್ ಪಂದ್ಯಾವಳಿ ನಡೆಯಲಿವೆ. ಜ. 17 ರಂದು ಗವಿಮಠ ಆವರಣದಲ್ಲಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ, ಎತ್ತಿನ ಬಂಡಿ ಅಥವಾ ಎತ್ತಿನ ಬಂಡಿ ಅಲಂಕಾರ ಸ್ಪರ್ಧೆ ಮತ್ತುತಾಲ್ಲೂಕುಕ್ರೀಡಾಂಗಣದಲ್ಲಿಮಹಿಳೆಯರಿಗಾಗಿ ಥ್ರೋಬಾಲ್ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಈ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಸೇರಿದಂತೆ ಇತರೆ ಹಲವಾರು ಬಹುಮಾನಗಳನ್ನು ನೀಡಲಾಗುತ್ತದೆ ಎಂದು ಸಂಸದರು ಮಾಹಿತಿ ನೀಡಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ. ಶ್ರೀನಿವಾಸ ಗುಪ್ತಾ, ವೀರೇಶ್ ಮಹಾಂತಯ್ಯನಮಠ, ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಬಸವರಾಜ, ಕೊಪ್ಪಳತಾಲ್ಲೂಕುಕ್ರೀಡಾಧಿಕಾರಿಶರಣಪ್ಪಬಂಡಿಹಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಎನ್.ಇ.ಎಸ್.ನಿಂದ ರಾಷ್ಟ್ರೀಯ ಗಣಿತ ದಿನ ಆಚರಣೆ

## ಗಣಿತ ಕ್ಷೇತ್ರಕ್ಕೆ ಸಾಟಿಯಿಲ್ಲದ ಕೊಡಗೆ ನೀಡಿದ ಶ್ರೀನಿವಾಸ ರಾಮಾನುಜನ್: ಐಐಎಸ್ಸಿ ಗಣಿತ ಪ್ರಾಧ್ಯಾಪಕ ಪ್ರೊ. ಆರ್. ವಿಠಲ್ ರಾವ್

**ಬೆಂಗಳೂರು** : ಗಣಿತ ಕ್ಷೇತ್ರಕ್ಕೆ ಶ್ರೀನಿವಾಸ ರಾಮಾನುಜನ್ ಸಾಟಿಯಿಲ್ಲದ ಕೊಡುಗೆಗಳನ್ನು ನೀಡಿದ್ದು, ಅವರ ಸಾಧನೆ ಅನನ್ಯ ಎಂದು ಬೆಂಗಳೂರಿನ ಐಐಎಸ್ಸಿ ಗಣಿತ ವಿಭಾಗದ ಪ್ರಾಧ್ಯಾಪಕ ಪ್ರೊ. ಆರ್. ವಿಠಲ್ ರಾವ್ ಹೇಳಿದ್ದಾರೆ. ಡಾ. ಎಚ್. ಎನ್. ನ್ಯಾಷನಲ್ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ನ್ಯಾಷನಲ್ ಕಾಲೇಜ್ ಜಯನಗರ ಸ್ನಾತಕೋತ್ತರ ಗಣಿತ ವಿಭಾಗದಿಂದ ರಾಷ್ಟ್ರೀಯ ಗಣಿತ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 1987 ರಲ್ಲಿ ರಾಮಾನುಜನ್ ಅವರ ಜನ್ಮ ಶತಮಾನೋತ್ಸವ ಆಚರಿಸಿದ್ದು, ನಂತರ ಅವರ ಕೊಡುಗೆಗಳ ಬಗ್ಗೆ ಜನ ಹೆಚ್ಚು ಅರ್ಥಮಾಡಿಕೊಳ್ಳಲಾರಂಭಿಸಿದರು. 2012 ರಲ್ಲಿ ಡಾ. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಪ್ರತಿವರ್ಷ ರಾಮಾನುಜನ್ ಜನ್ಮದಿನವನ್ನು ರಾಷ್ಟ್ರೀಯ ಗಣಿತ ದಿನವನ್ನಾಗಿ ಆಚರಿಸಬೇಕೆಂಬ ಶಿಫಾರಸ್ಸನ್ನು ಅನುಷ್ಠಾನಕ್ಕೆ ತಂದರು. ನಂತರ ಗಣಿತ ದಿನ ಆಚರಿಸುವ



ಪರಂಪರೆ ಪ್ರಾರಂಭವಾಯಿತು. ತಾಂತ್ರಿಕವಾಗಿ ರಾಮಾನುಜನ್ ಅಪಾರ ಕೆಲಸ ಮಾಡಿದ್ದು, ಇದು ಶಾಶ್ವತವಾಗಿ ಉಳಿಯುತ್ತದೆ ಎಂದರು.

ಎನ್.ಇ.ಎಸ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ. ಎಚ್. ಎನ್. ಸುಬ್ರಹ್ಮಣ್ಯ ಮಾತನಾಡಿ, ರಾಮಾನುಜನ್ ಗಣಿತ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಶಿಕ್ಷಣವನ್ನು ಉತ್ತೇಜಿಸಲು ವ್ಯಾಪಕ ಕ್ರಮಗಳನ್ನು ಕೈಗೊಂಡಿದ್ದು, ಆ ಪರಂಪರೆಯನ್ನು ನಾವು ಮುಂದುವರೆಸುತ್ತಿದ್ದೇವೆ ಎಂದರು.

ಭಾರತೀಯ ವಿದ್ಯಾ ಭವನದ ಗಾಂಧಿ ವಿಜ್ಞಾನ ಮತ್ತು ಮಾನವ ಮೌಲ್ಯಗಳ ಕೇಂದ್ರದ ನಿರ್ದೇಶಕ ಡಾ. ಎಸ್. ಬಾಲಚಂದ್ರ ರಾವ್ ಮಾತನಾಡಿ, ಬಸವನಗುಡಿಯ ನ್ಯಾಷನಲ್ ಕಾಲೇಜು ಗಣಿತ ಪರಂಪರೆಗೆ ಮಹೋನ್ನತ ಕೊಡುಗೆ ನೀಡಿದೆ. ಎಚ್. ನರಸಿಂಹಯ್ಯ ಅವರ ಆದರ್ಶವನ್ನು ಪಾಲಿಸುತ್ತಿದೆ ಎಂದರು.

ಎನ್.ಇ.ಎಸ್ ಸಂಸ್ಥೆಯ ಕಾರ್ಯದರ್ಶಿ ವಿ. ವೆಂಕಟಶಿವಾರೆಡ್ಡಿ ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಗಣಿತದ ಕೊಡಗೆ ಅಪಾರವಾಗಿದ್ದು, ಮುಂದಿನ ಪೀಳಿಗೆ ರಾಮಾನುಜನ್ ಅವರನ್ನು ಅನುಸರಿಸಬೇಕು ಎಂದರು.

ಕುವೆಂಪು ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಬಿ. ಜೆ. ಗಿರೀಶಾ, ಎನ್. ಇ. ಎಸ್. ನ ಕಾರ್ಯದರ್ಶಿ ಹಾಗೂ ಜಯನಗರ ನ್ಯಾಷನಲ್ ಇಂಜಿನಿಯರಿಂಗ್ ಕಾಲೇಜಿನ ಅಧ್ಯಕ್ಷರಾದ ವೆಂಕಟಾಶಿವಾ ರೆಡ್ಡಿ, ಜಯನಗರ ನ್ಯಾಷನಲ್ ಕಾಲೇಜು ಅಧ್ಯಕ್ಷರಾದ ಡಾ. ಪಿ. ಎಲ್. ವೆಂಕಟ ರಾಮ ರೆಡ್ಡಿ, ಎನ್. ಸಿ. ಜೆ. ಪ್ರಾಚಾರ್ಯ ಡಾ. ಪಿ. ಎಲ್. ರಮೇಶ್ ಮತ್ತು ಡಾ. ಎಚ್. ಎನ್. ನ್ಯಾಷನಲ್ ಕಾಲೇಜ್ ಆಫ್ ಎಂಜಿನಿಯರಿಂಗ್ ನ ಪ್ರಾಚಾರ್ಯರಾದ ಡಾ. ಡಿ. ಜಯದೇವಪ್ಪ ಮತ್ತಿತರರು ಉಪಸ್ಥಿತರಿದ್ದರು.

# ಕುರಿಗಾರರಿಗೆ ಸರ್ಕಾರದ ಯೋಜನೆಗಳ ಸೌಲಭ್ಯ ತಲುಪಿಸಿ: ಸಿಇಒ ರಾಹುಲ್ ರತ್ನಂ ಪಾಂಡೇಯ

**ಕೊಪ್ಪಳ :** ಜಿಲ್ಲೆಯ ಕುರಿಗಾರರಿಗೆ ಸರ್ಕಾರದ ಯೋಜನೆಗಳ ಸೌಲಭ್ಯ ತಲುಪಿಸುವಂತೆ ಪಶು ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಹೇಳಿದರು.



ಅವರು ಸೋಮವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳೊಂದಿಗೆ ಕುರಿಗಾರರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದರು.

ಕುರಿ–ಮೇಕೆ ಸಾಕಾಣಿಕೆಗೆ ಮತ್ತು ಕುರಿಗಾರರಿಗೆ ಸರ್ಕಾರವು ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ, ಸಹಾಯಧನ ಸೌಲಭ್ಯ, ಅಗತ್ಯ ಪರಿಕರಗಳ ವಿತರಣೆ ಮತ್ತು ಜಾನುವಾರುಗಳಿಗೆ ಲಸಿಕೆ ಹೀಗೆ ವಿವಿಧ ಸೌಲಭ್ಯಗಳನ್ನು ನೀಡುತ್ತಿದೆ. ಈ ಎಲ್ಲಾ ಕಾರ್ಯಕ್ರಮಗಳ ಬಗ್ಗೆ ಜಿಲ್ಲೆಯ ಕುರಿಗಾರರಿಗೆ ಜಾಗೃತಿ ಮೂಡಿಸಬೇಕು. ಸರ್ಕಾರದಯೋಜನೆಗಳಿಗೆಅರ್ಜಿಸಲ್ಲಿಸುವ ಪ್ರಮಾಣ ಶೇ100 ರಷ್ಟಾಗಬೇಕು ಮತ್ತು ಸೌಲಭ್ಯ ವಿತರಣೆಯಲ್ಲೂ ಜಿಲ್ಲೆಯ ಪ್ರಗತಿ ಹೆಚ್ಚಾಗಬೇಕು. ಬಹಳಷ್ಟು ಕುರಿಗಾರರಿಗೆ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಹೇಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂಬುವುದು ತಿಳಿದಿರುವುದಿಲ್ಲ ಎಂದರು.

ಸಂಚಾರಿ ಮತ್ತು ವಲಸೆ ಕುರಿಗಾರರಿಗೆ ಗುರುತಿನ ಚೀಟಿ ನೀಡುವ ಸರ್ಕಾರಿ ಆದೇಶದಂತೆ ಅಗತ್ಯ ಕ್ರಮ ಜರುಗಿಸಿ. ಅನುಗ್ರಹ ಯೋಜನೆಯಡಿ ಸತ್ತ ಕುರಿ–ಮೇಕೆಗಳಿಗೆ ಪರಿಹಾರ ವಿತರಣೆಯಲ್ಲಿ ಬಾಕಿ ಇರುವ ಪ್ರಕರಣಗಳಿಗೆ ಅನುದಾನಕ್ಕಾಗಿ ಜಿಲ್ಲೆಯ ಕುರಿಗಾರರ ಬೇಡಿಕೆಯೊಂದಿಗೆ ಕೇಂದ್ರ ಕಚೇರಿಗೆ ಪತ್ರ ಬರೆದು ಪರಿಹಾರ ವಿತರಿಸುವಂತೆ ಕ್ರಮ ಕೈಗೊಳ್ಳಬೇಕು. ಕುರಿಗಳನ್ನು ಮಳೆಯಿಂದ ಸಂರಕ್ಷಣೆಗೆ ತಾಡಪಾಲ ಶೆಡ್, ವಲಸೆ ಕುರಿಗಾರರ ಸಂರಕ್ಷಣೆಗೆ ತಾತ್ಕಾಲಿಕ ಶೆಡ್ ನಿರ್ಮಾಣ ಮತ್ತು ಕಂಬಳಿಗಳ ವಿತರಣೆ, ಸತ್ತ ಕುರಿ ಮೇಕೆಗಳಿಗೆ ಪರಿಹಾರ ಹಾಗೂ ಕುರಿಗಾರರ ಇತರೆ ಬೇಡಿಕೆಗಳ ಪಟ್ಟಿ ತಯಾರಿಸಿ ಯೋಜನೆಯ ಅಳವಡಿಕೆ ಮತ್ತು ಅನುದಾನಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಪಶು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಕುರಿಗಾರರ ಮಕ್ಕಳು ಯಾವುದೇ ಕಾರಣಕ್ಕೂ ಶಿಕ್ಷಣದಿಂದ ವಂಚಿತರಾಗಬಾರದು. ಈ ಹಿಲ್ಲೆಯಲ್ಲಿ ಪಶು ವೈದ್ಯಾಧಿಕಾರಿಗಳುತಮ್ಮವ್ಯಾಪ್ತಿಯಲ್ಲಿಬರುವ ಕುರಿಗಾರರ ಸಂಘಗಳ ಸಹಕಾರದೊಂದಿಗೆ ಕುರಿಗಾರರ ಮಕ್ಕಳ ಶಿಕ್ಷಣದ ಸ್ಥಿತಿಗತಿಗಳ ಬಗ್ಗೆ ವರದಿ ಸಲ್ಲಿಸಬೇಕು. ಜಿಲ್ಲೆಯಲ್ಲಿರುವ ಪಶು ವೈದ್ಯರ ಕೊರತೆಯನ್ನು ನೀಗಿಸಲು ಅತಿಥಿ ಶಿಕ್ಷಕರ ರೀತಿಯಲ್ಲಿ ಜಿಲ್ಲೆಯ ಪಶು ವೈದ್ಯಾಧಿಕಾರಿಗಳನ್ನು ನೇಮಿಸಿಕೊಳ್ಳಬೇಕು. ಇದಕ್ಕಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನ ಸದ್ಬಳಕೆ ಮಾಡಿಕೊಳ್ಳಲು ಅವಕಾಶವಿದ್ದು, ಪಶು ವೈದ್ಯಾಧಿಕಾರಿಗಳ ಸೇವೆಯನ್ನು ತ್ವರಿತವಾಗಿ ಪಡೆದುಕೊಳ್ಳುವಂತೆ ಸೂಚಿಸಿದರು.

ಅಳವಂಡಿ ಹೋಬಳಿಯ ಹಲಗೇರಿ ಗ್ರಾಮದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಅಧ್ಯಕ್ಷರಾದ ಗುಡದಪ್ಪ ಬಸಪ್ಪ ಬನ್ನಪ್ಪನವರ ಮಾತನಾಡಿ, ಅಮೃತ ಯೋಜನೆಯಡಿ ಅರ್ಜಿ ಸಲ್ಲಿಸಿ, ಒಂದು ವರ್ಷ ಕಳೆದರೂ ಸಹ ಫಲಾನುಭವಿಗಳಿಗೆ ಸೌಲಭ್ಯಗಳು ಇನ್ನೂ ಸಿಗುತ್ತಿಲ್ಲ. ಕೂಡಲೇ ಯೋಜನೆಯ ಲಾಭವನ್ನು ಅರ್ಹ ಕುರಿಗಾರರಿಗೆ ತಲುಪಿಸುವ ಕೆಲಸವನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮಡಬೇಕು. ನಮ್ಮ ಕುರಿಗಾಯಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸಮರ್ಪಕವಾಗಿ ತಲುಪಿಸಲು ಇನ್ನೂ ಹೆಚ್ಚಿನ ಕೆಲಸ ಮಾಡಬೇಕಿದೆ ಎಂದರು.

ಗಂಗಾವತಿಯ ಹಿಮಾಲಯ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಕಾರ್ಯನಿರ್ವಹಣಾಧಿಕಾರಿ ಕೆ.ಬಿ ಜೂಡಿ ಮಾತನಾಡಿ, ಮಾರುಕಟ್ಟೆಯಲ್ಲಿ ಕುರಿಗಳನ್ನು ಮಾರಾಟ ಮಾಡಲು ವಾರದಲ್ಲಿ ಒಮ್ಮೆ ಪ್ರತಿ ಶುಕ್ರವಾರದಂದು ಕುಕನಪಳ್ಳಿಯಲ್ಲಿ ಸಂತೆ ನಡೆಯುತ್ತದೆ. ಇದರೆ ಜೊತೆಗೆ ಡಿಜಿಟಲ್ ಮಾರುಕಟ್ಟೆಅತ್ಯವಶ್ಯಕವಾಗಿದ್ದು, ಗಂಗಾವತಿ ಮಾರುಕಟ್ಟೆಸಮಿತಿಯಲ್ಲಿ ಡಿಜಿಟಲ್ ತೂಕದ ಯಂತ್ರವನ್ನು ಅಳವಡಿಸಬೇಕು ಎಂದರು.

ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ ಪಿ.ಎಂ ಮಲ್ಲಯ್ಯ ಅವರು ಮಾತನಾಡಿ, ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಸಾಲ ಪಡೆಯಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, 2025ರ ಮಾರ್ಚ್ 31ರವರೆಗೆ ಆವಕಾಶವಿರುತ್ತದೆ. ಆಸಕ್ತ ಕುರಿಗಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಕೊಪ್ಪಳ ಜಿಲ್ಲಾ ವ್ಯವಸ್ಥಾಪಕ ಡಾ ಆನಂದ ದೇವರನಾವದಗಿ ಮಾತನಾಡಿ, ಕುರಿ ಹಾಗೂ ಮೇಕೆಗಳಿಗೆ ಔಷಧಿಗಳ ವಿತರಣೆಗಾಗಿ ಕೇಂದ್ರ ಕಚೇರಿಗೆ ಈಗಾಗಲೇ ಬೇಡಿಕೆ ಸಲ್ಲಿಸಲಾಗಿದ್ದು, ಸರಬರಾಜು ಆದ ತಕ್ಷಣ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕೊಪ್ಪಳದ ಜೈ ಭೀಮ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಅಧ್ಯಕ್ಷರಾದ ಮಹಾಲಕ್ಷ್ಮೀ ಲಕ್ಷ್ಮಣ ಕಂದಾರಿ ಮಾತನಾಡಿದರು.

ಸಭೆಯಲ್ಲಿಮುಖ್ಯಪಶುವೈದ್ಯಾಧಿಕಾರಿಗಳಾದ ಡಾ ವಿನೋದ ಕುಮಾರ ದಿವಟರ, ಡಾ ಶಿವರಾಜ ಎಂ ಶೆಟ್ಟರ, ಡಾ ಚನ್ನಬಸಪ್ಪ ಹಳ್ಳದ, ಡಾ. ಪ್ರಕಾಶ ಚೂರಿ, ಡಾ ಜಾಕೀರ ಹುಸೇನ್, ಕುರಿಗಾರರಾದ ಮುಕ್ಕುಂದಪ್ಪ ಅಳವಂಡಿ, ಮಹಾಂತಪ್ಪ ಹನವಾಳ ಸೇರಿದಂತೆ ಜಿಲ್ಲೆಯ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು, ಸದಸ್ಯರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಾಗಲಕೋಟ ತೋಟಗಾರಿಕಾ ವಿಶ್ವವಿದ್ಯಾಲಯಕ್ಕೆ ನೇಮಕ



**ಕೊಪ್ಪಳ :** ಬಾಗಲಕೋಟ ತೋಟಗಾರಿಕಾ ವಿಶ್ವವಿದ್ಯಾಲಯ ನಿರ್ವಹಣಾ ಮಂಡಳಿ ಸದಸ್ಯರಾಗಿ ನೇಮಕಗೊಂಡ ಮಹಾಂತೇಶಗೌಡ ಪಾಟೀಲ್ ಅವರನ್ನು ಮಾಜಿ ಸಂಸದ ಸಂಗಣ್ಣ ಕರಡಿಯವರು ತಮ್ಮ ನಿವಾಸದಲ್ಲಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಗವಿಸಿದ್ದಪ್ಪ ಕರಡಿ, ಪ್ರಥಮ ದರ್ಜೆ ಗುತ್ತಿಗೆದಾರರಾದ ವಿಜಯಕುಮಾರ್ ಪಟ್ಟಣಶೆಟ್ಟಿ, ಪ್ರವೀಣ್ ಕುಮಾರ್ ಉಳ್ಳಾಗಡ್ಡಿ, ವೀರಯ್ಯಸ್ವಾಮಿ ಬೊಮ್ಮನಾಳ ಉಪಸ್ಥಿತರಿದ್ದರು.

# ಸಮಾಜ ವಿಜ್ಞಾನ ವಸ್ತು ಪ್ರದರ್ಶನಗಳು ಮಕ್ಕಳ ಸೃಜನಾತ್ಮಕ ಕಲಿಕೆಗೆ ಸಹಾಯಕ

**ಕೊಪ್ಪಳ :** ಸಮಾಜ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಮಾದರಿ ನಿರ್ಮಾಣ ಚಟುವಟಿಕೆಗಳು ಮಕ್ಕಳಲ್ಲಿ ಸೃಜನಾತ್ಮಕತೆಯನ್ನು ಬೆಳೆಸುವಲ್ಲಿ ಮಹತ್ತರವಾದ ಪಾತ್ರ ವಹಿಸುತ್ತವೆ ಎಂದು ಖ್ಯಾತ ಉದ್ಯಮಿಗಳಾದ ಹಾಗೂ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ ಹೇಳಿದರು. ಅವರು ನಗರದ ಶ್ರೀ ಗವಿಸಿದ್ದೇಶ್ವರ ಸಂಯುಕ್ತ ಪ್ರೌಢ ಶಾಲೆಯಲ್ಲಿ 2024–25 ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನದ ಅಂಗವಾಗಿ ಸಮಾಜ ವಿಜ್ಞಾನ ವಿಷಯದ ವಸ್ತು ಪ್ರದರ್ಶನದ ಉದ್ಘಾಟನೆಯನ್ನು ನೇರವೇರಿಸಿದ ಅವರು ವಸ್ತು ಪ್ರದರ್ಶನಗಳು ಮಕ್ಕಳಲ್ಲಿ ವಿಭಿನ್ನಾತ್ಮಕ ಆಲೋಚನೆ ಮತ್ತು ಚಿಂತನೆಯನ್ನು ಬೆಳೆಸುವುದರ ಮೂಲಕ ಮಕ್ಕಳ ಅನುಭವಪೂರಿತವಾದ ಕಲಿಕೆಗೆ ಸಹಾಯಕಾರಿ ಆಗುತ್ತದೆ ಎಂದು ಹೇಳಿದರು.



ಮುಖ್ಯ ಅತಿಥಿ ಸ್ಥಾನ ವಹಿಸಿ ಮಾತನಾಡಿದ ಶಾಲೆಯ ಆಡಳಿತಾಧಿಕಾರಿಗಳಾದ ಗವಿಸಿದ್ಧಪ್ಪ.ವಿ.ಕೊಪ್ಪಳ ಮಾತನಾಡಿ ಮಕ್ಕಳ ಕಲಿಕೆಯಲ್ಲಿ ಪಠ್ಯ ವಿಷಯದ ಚಟುವಟಿಕೆಗಳ ಜೊತೆಗೆ ಸಹಪಠ್ಯ ಚಟುವಟಿಕೆಗಳು ಮಕ್ಕಳನ್ನು ಸದಾ ಕ್ರೀಯಾಶಿಲರನ್ನಾಗಿ ಮಾಡುತ್ತವೆ ಇಂತಹ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು. ವಸ್ತು ಪ್ರದರ್ಶನದಲ್ಲಿ ಇತಿಹಾಸದ ಘಟನೆಗಳನ್ನು ವಿದ್ಯಾರ್ಥಿಗಳು ತಾವು ತಯಾರಿಸಿದ ಮಾದರಿಗಳ ವಿವರಣೆಯನ್ನು ಅತಿಥಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಸವಿಸ್ತಾರವಾಗಿ ನೀಡಿದರು. ಅತಿಥಿ ಸ್ಥಾನವನ್ನು ಚನ್ನಬಸಪ್ಪ ಹೊಳೆಯಪ್ಪನವರ ಹಾಗೂ ಲಲಿತ್ ಜೈನ್ ವಹಿಸಿಕೊಂಡಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯ ಗುರುಗಳಾದ ಅಮರೇಶ.ಎ. ಕರಡಿಯವರು ವಹಿಸಿದ್ದರು.

ವಿದ್ಯಾರ್ಥಿ ಕೆ.ಮಲ್ಲಿಕಾರ್ಜುನ ಪ್ರಾರ್ಥಿಸಿದರು. ಶಿಕ್ಷಕರಾದ ದೇವಪ್ಪ.ಜಿ ವೇದಿಕೆ ಮೇಲಿರುವ ಗಣ್ಯರಿಗೆ ಸ್ವಾಗತಿಸಿದರು. ಹಾಗೂ ಹೆಚ್.ಎಂ.ವಂದಾಲಿ ಶಿಕ್ಷಕರು ಅತಿಥಿಗಳ ಪರಿಚಯ ನೀಡಿದರು. ರವಿ ಎನ್.ರಂಜಣಗಿ ಶಿಕ್ಷಕರು ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನಾಡಿದರೆ, ಹೆಚ್.ಎಂ.ಗಾಳಿ ಯವರು ವಂದಿಸಿದರು ಹಾಗೂ ಗವಿಸಿದ್ಧಪ್ಪ ಹತ್ತಿ ಶಿಕ್ಷಕರು ಕಾರ್ಯಕ್ರಮದ ನಿರೂಪಿಸಿದರು.

# ಅಖಿಲ ಭಾರತ ಅಂತರ್‌ವಿಶ್ವವಿದ್ಯಾಲಯ ಯೋಗ ಸ್ಪರ್ಧೆಗೆ ಏಳು ವಿದ್ಯಾರ್ಥಿಗಳು ಆಯ್ಕೆ

**ಕೊಪ್ಪಳ :** ಅಖಿಲ ಭಾರತಅಂತರ್ ವಿಶ್ವವಿದ್ಯಾಲಯ ಪುರುಷ ಮತ್ತು ಮಹಿಳೆಯರ ಯೋಗ ಸ್ಪರ್ಧೆಯು ದಿನಾಂಕ 24–12–2024 ರಿಂದ 27–12–2024 ರವರೆಗೆ ಒಡಿಸ್ಸಾದ ಕೆ.ಐ.ಟಿ.ಟಿ. ವಿಶ್ವವಿದ್ಯಾಲಯ, ಭುವನೇಶ್ವರದಲ್ಲಿ ಜರುಗಲಿದೆ. ಸದರಿ ಪಂದ್ಯಾಟ–ಕ್ಕೆ ಕೊಪ್ಪಳದ ಶ್ರೀ ಗವಿಸಿದ್ಧೇಶ್ವರ ಪದವಿ ಮಹಾವಿದ್ಯಾಲಯದ ಬಿ.ಎ. ಅಂತಿಮ ವರ್ಷದ ವಿದ್ಯಾರ್ಥಿ ಕು.ಕಿರಣಕುಮಾರ, ಬಿ.ಕಾಂ ಅಂತಿಮದ ವರ್ಷದ ವಿದ್ಯಾರ್ಥಿಕು.ಅನಿತ, ಮತ್ತು ಬಿಎಸ್ಸಿ ಅಂತಿಮ ವರ್ಷದ ವಿದ್ಯಾರ್ಥಿಗಳಾದ ಕು.ಸೌಮ್ಯ ಸಂಗಪ್ಪ, ಕು. ವರ್ಷಾ ಬಿ., ಕು. ನಾಗವೇಣಿ ಎ, ಕು.ಚಂದ್ರಿಕಾ, ಕು.ರಶ್ಮಿ ಕೆ.ಇವರುಗಳು ವಿಜಯನಗರ ಶ್ರೀ ಕೃಷ್ಣದೇವರಾಯವಿಶ್ವವಿದ್ಯಾಲಯದತಂಡದಆಟಗಾರರಾಗಿಆಯ್ಕೆಯಾಗಿರುತ್ತಾರೆ.




ಸದರಿ ಏಳು ವಿದ್ಯಾರ್ಥಿಗಳಿಗೆ ಆಡಳಿತ ಮಂಡಳಿಯ ಕಾರ್ಯದರ್ಶಿಗಳಾದ ಡಾ.ಆರ್ ಮರೇಗೌಡ ಮತ್ತು ಶ್ರೀ ಗವಿಸಿದ್ದೇಶ್ವರ ಟ್ರಸ್ಟಿನ ಎಲ್ಲಾ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರಾದ ಡಾ.ಚನ್ನಬಸವ, ಕಾಲೇಜಿನದೈಹಿಕ ನಿರ್ದೇಶಕರಾದ ಶ್ರೀ ವಿನೋದ ಸಿ.ಮುದಿನಬಸನಗೌಡರ ಹಾಗೂ ಕಾಲೇಜಿನ ಸಮಸ್ತ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ಸಾಂಪ್ರದಾಯಿಕ ಬೋಧನಾ ಪದ್ಧತಿ ಪರಿಣಾಮಕಾರಿಯಲ್ಲ: ಡಾ. ಶಿವಪ್ರಸಾದ





**ಧಾರವಾಡ :** ಭಾರತದ ಉನ್ನತ ಶಿಕ್ಷಣವು ಗುರುಕುಲದಿಂದ ಆರಂಭವಾಗಿ ಆಧುನಿಕ ವಿಶ್ವವಿದ್ಯಾಲಯಗಳವರೆಗೆ ಪರಿಣಾಮ ಕಾರಿಯಾಗಿ ಬೆಳೆದುಕೊಂಡು ಬಂದಿದೆ ಎಂದು ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ ಶಿಕ್ಷಣ ನಿರ್ದೇಶಕರಾದ ಡಾ. ವಿ.ಆರ್. ಕಿರೇಸೂರ ಅವರು ಅಭಿಪ್ರಾಯಪಟ್ಟರು.

ನಗರದ ಅಂಜುಮನ್ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಹಮ್ಮಿಕೊಂಡ "ಎಂಪ್ಲಾಯ್‌ಮೆಂಟ್ ಎಂಪ್ಲಾಯ್ಬಿಲಿಟಿ ಆ್ಯಂಡ್ ಹೈಯರ್ ಎಜ್ಯುಕೇಶನ್ ಇನ್ ಇಂಡಿಯಾ : ದಿ ಮಿಸ್ಸಿಂಗ್ ಲಿಂಕ್" ಎಂಬ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡುತ್ತಾ ಪ್ರಸ್ತುತ 1,043 ವಿಶ್ವವಿದ್ಯಾಲಯಗಳು, 42,343 ಕಾಲೇಜುಗಳು, 11,779 ಸ್ವತಂತ್ರ ಸಂಸ್ಥೆಗಳು, 37.4 ಮಿಲಿಯನ್ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣವು ಸೇವೆ ಸಲ್ಲಿಸುತ್ತಾ ಬೃಹತ್ ಪ್ರಮಾಣದ ಬದಲಾವಣೆಯನ್ನು ತಂದಿದೆ ಎಂದರು.

ಇಂದು ಕೃಷಿ ಕಾರ್ಮಿಕರ ಕೊರತೆ ನೀಗಿಸಲು ಕೃಷಿ ಕಾಯಕಕ್ಕೆಡ್ರೋನ್ ಮತ್ತು ರೋಬೋಟಿಕ್ ಬಳಕೆಯು ಹೆಚ್ಚಿಸಿದೆ. ಕೃಷಿಯಲ್ಲಿ ತಂತ್ರಜ್ಞಾನದ ಅಳವಡಿಕೆಯಿಂದ ರೈತರಿಗೆ ಲಾಭ ತರುವುದಾಗಿ ತಿಳಿಸಿದರು. ಈ ರಾಷ್ಟ್ರೀಯ ವಿಚಾರ ಸಂಕಿರಣದ ದಿಕ್ಸೂಚಿ ಭಾಷಣಕಾರರಾದ ಧಾರವಾಡದ ಐ.ಐ.ಟಿ ಡೀನ್ ಡಾ. ಎಸ್. ಎಮ್. ಶಿವಪ್ರಸಾದ್ ಅವರು ಸಾಂಪ್ರದಾಯಿಕ ಬೋಧನಾ ಪದ್ಧತಿ ಬಿಟ್ಟು ತಂತ್ರಜ್ಞಾನ ಆಧಾರಿತ ಬೋಧನಾ ಪದ್ಧತಿಯನ್ನು ರೂಢಿಸಿಕೊಂಡಾಗ ಮಾತ್ರ ಕಲಿಕೆ ಪರಿಣಾಮಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು. ಪಠ್ಯಕ್ರಮ ರಚನೆಯಲ್ಲಿ ಬದಲಾವಣೆ ಬರಬೇಕಿದೆ. ಇದಲ್ಲದೇ, ಶಿಕ್ಷಕರು ಕಾಲಕಾಲಕ್ಕೆತಕ್ಕಂತೆಬದಲಾವಣೆಹೊಂದಬೇಕು ಅಂದಾಗಮಾತ್ರವೇಅಂತರಾಷ್ಟ್ರೀಯಮಟ್ಟದಲ್ಲಿ ಭಾರತವು ಮಾನವ ಸಂಪನ್ಮೂಲ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಭವಿಷ್ಯದ ಉದ್ಯೋಗಗಳ ಬೇಡಿಕೆಗಳಿಗೆ ವಿದ್ಯಾರ್ಥಿಗಳನ್ನು ಸಿದ್ಧಪಡಿಸುವಲ್ಲಿ ಕೌಶಲ್ಯ ಆಧಾರಿತ ಬೋಧನೆಯನ್ನು ಮಾಡಬೇಕು ಎಂದರು. ಪ್ರಸ್ತುತ ವಿಜ್ಞಾನ, ವೈದ್ಯಕೀಯ, ಇಂಜಿನಿಯರಿಂಗ್ ಹಾಗೂ ಕೃಷಿ ಹೀಗೆ ಸರ್ವ ರಂಗವುತಂತ್ರಜ್ಞಾನವನ್ನುಅಳವಡಿಸಿಕೊಂಡಿದೆ. ಹೀಗಾಗಿ ಶಿಕ್ಷಣದಲ್ಲಿಯೂ ಕೂಡ ತಂತ್ರಜ್ಞಾನವನ್ನು ಅಳವಡಿಸಿಕೊಂಡರೆ ವಿದ್ಯಾರ್ಥಿಗಳಭವಿಷ್ಯಕೂಡಉಜ್ವಲಗೊಳ್ಳಲಿದೆ ಎಂದುಅಭಿಪ್ರಾಯಪಟ್ಟರು.ರಾಷ್ಟ್ರೀಯವಿಚಾರ ಸಂಕಿರಣದಲ್ಲಿ ದೇಶದ ವಿವಿಧ ಭಾಗಗಳಿಂದ 120ಕ್ಕೂ ಅಧಿಕ ಪ್ರತಿನಿಧಿಗಳು ಪಾಲ್ಗೊಂಡಿದ್ದು, ಸುಮಾರು 82 ಸಂಶೋಧನಾ ಲೇಖನಗಳನ್ನು ಮಂಡಿಸಿದರು. ಸಂಸ್ಥೆಯ ಅಧ್ಯಕ್ಷ ಇಸ್ಮಾಯಿಲ್ ತಮಟಗಾರ, ಉಪಾಧ್ಯಕ್ಷ ಬಶೀರ್ ಅಹ್ಮದ್ ಜಹಗೀರದಾರ್, ಪ್ರಾಚಾರ್ಯ ಡಾ. ಎನ್. ಎಮ್. ಮಕಾಂದಾರ, ಡಾ. ಎ.ಎಸ್. ಬಳ್ಳಾರಿ, ಡಾ. ಆಯ್.ಎ.ಮುಲ್ಲಾ, ಡಾ.ಎನ್.ಬಿ. ನಾಲತವಾಡ, ಡಾ. ಮೇಟಿ ರುದ್ರೇಶ ಮತ್ತು ನಾಡಿನ ಅನೇಕ ವಿದ್ವಾಂಸರು, ಸಂಶೋಧಕರು, ಕಾಲೇಜಿನ ಪ್ರಾಧ್ಯಾಪಕ ವೃಂದ, ಶಿಕ್ಷಕೇತರ ವೃಂದ, ವಿದ್ಯಾರ್ಥಿಗಳು ಈ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡಿದ್ದರು.

# ತ್ಯಾಜ್ಯವನ್ನು ನಿರ್ಲಕ್ಷಿಸಿದರೆ ದಾರಿದ್ರ್ಯ ಪ್ರಾಪ್ತಿ

**ಧಾರವಾಡ :** ತ್ಯಾಜ್ಯಎನ್ನುವುದನ್ನು ಸಂಪನ್ಮೂಲವಾಗಿ ಪರಿವರ್ತನೆ ಮಾಡಿದಾಗ ಬಂಧುತ್ವ ಪ್ರಾಪ್ತಿಯಾಗುವುದು. ಇದ–ರಿಂದ ಪರಿಸರಕ್ಕೆ ಆಗುವ ಮಾರಕವನ್ನು ಕಡಿಮೆ ಮಾಡಬಹುದು. ಪರಿಸರ ಸಂರಕ್ಷಣೆ ಹಾಗೂ ತ್ಯಾಜ್ಯ ನಿರ್ವಹಣೆಯಲ್ಲಿ ಜನರ ಸಹಭಾಗಿತ್ವದೊಂದಿಗೆ, ಸಂಬಂಧಪಟ್ಟ ಅಧಿಕಾರಿಗಳ ಸಹಕಾರವು ಪ್ರಮುಖ ಪಾತ್ರ ವಹಿಸುತ್ತದೆ, ತ್ಯಾಜ್ಯ ಲಕ್ಷ್ಮಿಯನ್ನು ನಿರ್ಲಕ್ಷಿಸಿದರೆ ದಾರಿದ್ರ್ಯ ಪ್ರಾಪ್ತಿಯಾಗುತ್ತದೆ ಎಂದು ರಾಮದುರ್ಗದ ಪರಿಸರತಜ್ಞ ಭಾಲಚಂದ್ರ ಭಾಜಾಬಶೆಟ್ಟಿ ಹೇಳಿದರು.




ಅವರು ಕರ್ನಾಟಕ ವಿದ್ಯಾವರ್ಧಕ ಸಂಘದ ವಿಜ್ಞಾನ ಮಂಟಪವು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಘನ ಮತ್ತುದ್ರವತ್ಯಾಜ್ಯ ನಿರ್ವಹಣೆಯಲ್ಲಿ ಪರಿಸರ ಸ್ನೇಹಿ ಜೈವಿಕ ತಂತ್ರಜ್ಞಾನಗಳ ಅಳವಡಿಕೆ' ವಿಷಯ ಕುರಿತು ಉಪನ್ಯಾಸ ನೀಡುತ್ತಾ ಮಾತನಾಡಿದರು. ಮುಂದುವರೆದು ಮಾತನಾಡಿದ ಅವರು, ತ್ಯಾಜ್ಯದಕುರಿತು ವಿವರಿಸುತ್ತಾ, 1975 ರ ಆಸುಪಾಸಿನಿಂದ ತ್ಯಾಜ್ಯ ನಿರ್ವಹಣೆ ಸಮಸ್ಯೆ 13 ಲಕ್ಷಟನ್ ಭಾರತದಲ್ಲಿ, 135 ಲಕ್ಷಟನ್‌ಕರ್ನಾಟಕದಲ್ಲಿ, 12 ಲಕ್ಷಟನ್ ಹುಬ್ಬಳ್ಳಿ–ಧಾರವಾಡದಲ್ಲಿ ಕಂಡು ಬರುತ್ತಿದೆ. ಸರಕಾರದ ಯೋಜನೆಗಳು ತ್ಯಾಜ್ಯ ಬಳಕೆಗೆ ಸದುಪಯೋಗವಾದಾಗ ಮಾತ್ರ ಪರಿಸರ ಸಂರಕ್ಷಣೆ ಸಾಧ್ಯ.

ರಾಸಾಯನಿಕ ಮುಕ್ತ ಕೃಷಿಯನ್ನುರೈತರು ಅಳವಡಿಸಿಕೊಂಡಾಗ ಆರೋಗ್ಯಯುತವಾದ ಆಹಾರವನ್ನು ನೀಡುವುದಕ್ಕೆ ಸಾಧ್ಯ. ಇಲ್ಲವಾದರೆ ಮಾರಕ ರೋಗಗಳಿಂದ ಜನ 'ರಜೀವನದಲ್ಲಿಅಸ್ತವ್ಯಸ್ತವಾಗುತ್ತದೆ. ಗಟ್ಟಿ ಕಸ ನಿರ್ವಹಣೆಗೆಬುಟ್ಟಿಜಾಥಾ' ಹೀಗೆ ಹತ್ತು ಹಲವು ಜಾಥಾಗಳ ಮೂಲಕ ಜನರಲ್ಲಿಜಾಗೃತಿಯನ್ನು ಮೂಡಿಸಿ, ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರ ಪಾತ್ರದ ಕುರಿತು ಮನವರಿಕೆ ಮಾಡಿಕೊಟ್ಟಅವರು, ಕೆಲವೊಂದು ಪ್ರಾತ್ಯಕ್ಷಿಕೆಯ ಮೂಲಕ ಘನ ಮತ್ತುದ್ರವ ತ್ಯಾಜ್ಯಗಳ ನಿರ್ವಹಣೆ ಹೇಗೆ ಮಾಡಬೇಕು?, ರೈತರ ಮೌಲ್ಯವರ್ಧನೆ ಹೇಗೆ ಮಾಡಬೇಕು? ಎಂದು ಮಹತ್ವದ ವಿಷಯಗಳನ್ನು ಚರ್ಚಿಸಿ, ಸಂವಾದ ನಡೆಸಿಕೊಟ್ಟರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಹ ಕಾರ್ಯದರ್ಶಿ ಶಂಕರ ಕುಂಬಿ ಮಾತನಾಡಿ, ಕೇವಲ ಪರಿಸರ ಸಂರಕ್ಷಣೆ ಬಾಯಿ ಮಾತಿನಿಂದಾಗುವುದಲ್ಲ. ಅದು ನಮ್ಮೊಳಗೆ ಜಾಗೃತಿ ಮೂಡಿದಾಗ ಮತ್ತು ಸಂಘಟನಾತ್ಮಕವಾಗಿ ಪರಿಸರ ಕುರಿತ ಅಭಿಯಾನಗಳಲ್ಲಿ ಭಾಗವಹಿಸಿ, ಪ್ರತಿಯೊಬ್ಬರ ಮನೆ ಮನೆಗೂ ತಲುಪಿಸುವಂತೆ ಮಾಡಿದಾಗ ಮಾತ್ರ ಸ್ವಚ್ಛ ಪರಿಸರ, ನೆಮ್ಮದಿಯಜೀವನಇರಲು ಸಾಧ್ಯ. ಇಲ್ಲವಾದರೆ ಮುಂದಿನ ತಲೆಮಾರಿಗೆ ರೋಗಗಳನ್ನು ಹಸ್ತಾಂತರಿಸಿದಂತೆ ಆಗುತ್ತದೆಎಂದು ಕಳವಳ ವ್ಯಕ್ತಪಡಿಸಿದರು.

ವಿಜ್ಞಾನ ಮಂಟಪದ ಸಂಚಾಲಕ ಡಾ. ಜಿನದತ್ತ ಹಡಗಲಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಲಹಾ ಸಮಿತಿ ಸದಸ್ಯರಾದ ನವೀನಶಾಸ್ತ್ರಿ ರಾ.ಪುರಾಣಿಕ ನಿರೂಪಿಸಿದರು.ಡಾ. ಅರುಣಕುಮಾರ ಶಿರಹಟ್ಟಿ ವಂದಿಸಿದರು.

ಕಾರ್ಯಕ್ರಮದಲ್ಲಿ ಬಸವಪ್ರಭು ಹೊಸಕೇರಿ, ಶಂಕರ ಹಲಗತ್ತಿ, ಡಾ.ಶಿವಾನಂದ ಶೆಟ್ಟರ, ಡಾ.ಆನಂದ ಶಿವಪುರ, ಆರ್. ಜಿ. ತಿಮ್ಮಾಪೂರ, ಸರಸ್ವತಿ ಪೂಜಾರ, ಶಾರದಾದಾಬಡೆ, ನಿರ್ಮಲಾ ಹಿರೇಗೌಡರ, ಪ್ರಮೀಳಾ ಜಕ್ಕಣ್ಣವರ, ಕೆ.ಎಸ್. ಕೋರಿಶೆಟ್ಟರ, ಚನ್ನು ನೂಲ್ವಿ, ಬಸಲಿಂಗಪ್ಪ ಅರವಾಳದ, ಉಲ್ಲಾಸ ಹರಪನಹಳ್ಳಿ, ಆರ್.ಎಫ್. ಇಂಚಲ, ಕವಿತಾ ಎಲೆದಳ್ಳಿ, ಜಿ.ಜಿ. ಗೊಂದಿ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

# ಬೆಳಗಾವಿ ಸಮಾವೇಶಕ್ಕೆ ನವಲಗುಂದ ಕ್ಷೇತ್ರದಿಂದ 5 ಸಾವಿರ ಜನ

**ನವಲಗುಂದ :** ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನ ನಡೆದಿದ್ದು ಸದರೀ ಅಧಿವೇಶನ ನಡೆದು 100 ವರ್ಷ ಪೂರೈಸಿದ ಹಿನ್ನಲೆ ಬೆಳಗಾವಿಯಲ್ಲಿ ಡಿ.27 ರಂದು ನಡೆಯುವ ಗಾಂಧಿ ಭಾರತ ಬೃಹತ್ ಕಾಂಗ್ರೆಸ್ ಸಮಾವೇಶಕ್ಕೆ ನಮ್ಮ ಕ್ಷೇತ್ರದಿಂದ ಐದುಸಾವಿರ ಜನ ಭಾಗವಹಿಸಲಿದ್ದಾರೆ ಎಂದು ನವಲಗುಂದ ಶಾಸಕ ಎನ್.ಹೆಚ್. ಕೋನರಡ್ಡಿ ಹೇಳಿದರು.



ಅವರು ನಗರದ ಅಪ್ಪಾಜಿ ಗಾರ್ಡನಲ್ಲಿ ನಡೆದ ನವಲಗುಂದ, ಅಣ್ಣಿಗೇರಿ ಹಾಗೂ ಹುಬ್ಬಳ್ಳಿ ತಾಲ್ಲೂಕಿನ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಬೆಳಗಾವಿ ಶತಮಾನೋತ್ಸವ ಕಾರ್ಯಕ್ರಮ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಈ ಸುವರ್ಣ ಸಂಭ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದರು.

ದೇಶದ ಸ್ವತಂತ್ರಕ್ಕಾಗಿ, ಸ್ವರಾಜ್ಯ ಸ್ಥಾಪನೆಗಾಗಿ, ಸರ್ವಜನರ ಸ್ವಾಭಿಮಾನಕ್ಕಾಗಿ ಹೋರಾಡುತ್ತಿದ್ದ ದೇಶದ ಏಕೈಕ ಬೃಹತ್ ಸಂಘಟನೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಇದರ ಸಮಾವೇಶದ ಮೊದಲ ಅಧ್ಯಕ್ಷ ಈ ದೇಶದ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಅವರು ವಹಿಸಿದ್ದರು ಎಂಬ ವಿಷಯ ಭಾರತಿಯರಾದ ನಾವೆಲ್ಲರೂ ಹೆಮ್ಮೆಪಡುವ ವಿಷಯವಾಗಿದೆ.

ಈ 'ಗಾಂಧಿ ಭಾರತ' ಕಾರ್ಯಕ್ರಮದಲ್ಲಿ 150 ಸಂಸದರು ಪಾಲ್ಗೊಳ್ಳಲಿದ್ದಾರೆ. ಕ್ಷೇತ್ರದಿಂದ ಸಮಾವೇಶಕ್ಕೆ ಆಗಮಿಸುವ ಸರ್ವರು ಶುಭ್ರವಾದ ಬಿಳಿಬಟ್ಟೆ ಧರಿಸಿ ಅಧಿವೇಶನದಲ್ಲಿ ಭಾಗವಹಿಸಿ ಈ ಸಮಾವೇಶವನ್ನು ಅವಿಸ್ಮರಣೀಯಗೊಳಿಸಲು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ ಸರ್ವರಿಗೂ ವಿನಂತಿಸಿದರು.

ವಿನೋದ ಅಸೂಟಿ, ಬಾಪೂಗೌಡ ಪಾಟೀಲ್, ಚಂಬಣ್ಣ ಹಾಳದೋಟರ, ಶಾಂತಮ್ಮ ಗುಜ್ಜಳ, ಉಸ್ಮಾನ್ ಬಬರ್ಚಿ ಶತಮಾನೋತ್ಸ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಇದೆ ವೇಳೆ ಅಣ್ಣಿಗೇರಿ ಪುರಸಭಾ ಪಕ್ಷೇತರ ಸದಸ್ಯ ಶಿವಾನಂದ ಬೆಳಹಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಪುರಸಭೆ ಅಧ್ಯಕ್ಷ ಶಿವಾನಂದ ತಡಸಿ, ಉಪಾಧ್ಯಕ್ಷೆ ಪರೀದಾಬೇಗಂ ಬಬರ್ಚಿ, ವಿ ಎಲ್ ಹಿರೇಗೌಡ್ರ, ಮಂಜು ಮಾಯಣ್ಣವ್ವರ ,ನಂದಿನಿ ಹಾದಿಮನಿ, ಶಿವಾನಂದ ಭೂಮಣ್ಣವರ, ಮೋದಿನ ಶಿರೂರ, ಶಿರಾಜ ಧಾರವಾಡ, ಯಾಸ್ಮಿನ್ ಗುದಗಿ ಸೇರಿ ಪುರಸಭೆ ಸದಸ್ಯರು, ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸಿದ್ದರು.

# ನಲಗುಂದ: ಕಿಸಾನ್ ಗೋಷ್ಠಿ ಕಾರ್ಯಕ್ರಮ

**ನವಲಗುಂದ :** ರೈತ ದೇಶದ ಬೆನ್ನೆಲುಬು ಅನ್ನುತ್ತಾರೆ ನಮ್ಮ ಸರಕಾರ ರೈತನಿಗೆ ಬೇಕಾದ ಎಲ್ಲ ಸೌಕರ್ಯಗಳನ್ನು ನೀಡಲು ಬದ್ದವಾಗಿದೆ. ರೈತರ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮವನ್ನು ಹಮ್ಮಿಕೊಂಡು ಅದನ್ನು ಕಾರ್ಯರೂಪಕ್ಕೆ ತರುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು ಎಂದು ಶಾಸಕ ಎನ್ ಎಚ್ ಕೋನರಡ್ಡಿ ಹೇಳಿದರು.




ಅವರುತಾಲ್ಲೂಕಿನಬೆಳವಟಗಿಕೃಷಿಸಂಶೋಧನಾ ಕೇಂದ್ರದಲ್ಲಿ ಸಂಶೋಧನಾ ಕೇಂದ್ರ ಬೆಳವಟಗಿ, ಕೃಷಿ ಇಲಾಖೆ ಆತ್ಮಾ ಯೋಜನೆ, ತಾಲ್ಲೂಕಾ ಕೃಷಿಕ ಸಮಾಜ ಹಾಗೂ ಕೃಷಿ ಇಲಾಖೆ ಇವರ ಸಹಯೋಗದಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಕಿಸಾನಗೋಷ್ಠಿ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು

ಇಂದು ರೈತರ ಜೀವನ ಸಂಕಷ್ಟಕ್ಕೆ ಸಿಲುಕಿದೆ. ಎಷ್ಟೋ ರೈತರು ಕೃಷಿ ಬಿಟ್ಟು ಬೇರೆ ಕೆಲಸದತ್ತ ಮುಖ ಮಾಡುತ್ತಿದ್ದಾರೆ. ಕೃಷಿಯಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳಾಗಿದ್ದು, ಲಭ್ಯವಿರುವ ಹೊಸ ತಂತ್ರಜ್ಞಾನ ಬಳಸಿ ರೈತರು ಆದಯ ಹೆಚ್ಚಿಸಿಕೊಳ್ಳಬೇಕುಎಂದರು.ನಂತರಕೃಷಿಯಲ್ಲಿ ಸಾಧನೆಮಾಡಿದರೈತರನ್ನುಸನ್ಮಾನಿಸಲಾಯಿತು ಇದಕ್ಕೂ ಮೊದಲು ಹಿಂಗಾರು ಬೆಳೆ ನಿರ್ವಹಣ ಕುರಿತು ರೈತರಿಗೆ ಕೃಷಿ ಸಂಶೋಧನಾ ಕೇಂದ್ರದ ಅಧಿಕಾರಿಗಳು ಮಾಹಿತಿ ನೀಡಿದರು

ಬೆಳವಟಗಿ ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥರಾದ ಡಾ. ರಫೀ ಅಣ್ಣಿಗೇರಿ ಕೃಷಿಕ ಸಮಾಜದ ಅಧ್ಯಕ್ಷ ಬಸವರಾಜ ಕುಬಸದ, ಮಹದಾಯಿ ಕಳಸಾ ಬಂಡೂರಿ ಹೋರಾಟ ಸಮಿತಿ ಅಧ್ಯಕ್ಷ ಯಲ್ಲಪ್ಪ ದಾಡಿಬಾಯಿ, ಪ್ರಕಾಶ ಶಿಗ್ಲಿ, ಮಲ್ಲೇಶ ಉಪ್ಪಾರ, ಯೋಗಪ್ಪ ಗೋಲನಾಯ್ಕರ, ವಿ ಡಿ ಅಂದಾನಿಗೌಡ್ರ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಗ್ರಾಹಕರು ಜಾಗೃಕತೆಯಿಂದ ವಸುಗಳನ್ನು ಖರಿದಿಸಲು ಮುಂದಾಗಿ: ನ್ಯಾಯಧಿಶ ಅರವಿಂದ ಹಾಗರಗಿ

**ವಿಜಯಪುರ :** ನಾವು ಮಾರುಕಟ್ಟೆಯಲ್ಲಿ ಅಗತ್ಯ ವಸ್ತುಗಳನ್ನು ಖರೀದಿಸಿದಲ್ಲಿ ನಾವು ಖರೀದಿಸಿದ ವಸ್ತುವಿಗೆ ಗ್ರಾಹಕರಾಗುತ್ತೇವೆ ಖರೀದಿಸಿದ ವಸ್ತು ನಿಖರತೆಯಿಂದ ಕೂಡಿರಬೇಕು. ಎಂದು ಹಿರಿಯ ಸಿವಿಲ್ ನ್ಯಾಯಧೀಶರು ಮತ್ತು ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅರವಿಂದ ಹಾಗರಗಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಅಂಜುಮನ್ ಕಾನೂನು ಮಹಾವಿದ್ಯಾಲಯ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಆಹಾರ ಸುರಕ್ಷಾ ಇಲಾಖೆ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಹಾಗೂ ಜಿಲ್ಲಾ ಮಾಹಿತಿ ಕೇಂದ್ರ ನ್ಯೂ ಸಂಸ್ಥೆ ವಿಜಯಪುರ ಇವರ ಸಂಯುಕ್ತಾಶ್ರಯದಲ್ಲಿ ಗ್ರಾಹಕರೆ ರಾಜರು ಗ್ರಾಹಕರೆ ದೇವರು ಎಂಬ ಘೋಷ ವಾಕ್ಯದೊಂದಿದೆ ರಾಷ್ಟ್ರೀಯ ಗ್ರಾಹಕರ ದಿನಾಚರಣೆ 2024 ಕುರಿತು ಗ್ರಾಹಕ ನ್ಯಾಯದಲ್ಲಿ ವರ್ಚುವಲ್ ಅಹವಾಲು ಆಲಿಸುವಿಕೆ ಮತ್ತು ಡಿಜಿಟಲ್ ಪ್ರವೇಶಾವಕಾಶ ಕುರಿತು ಕಾರ್ಯಕ್ರಮದಲ್ಲಿ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ನಾವು ಪಡೆಯುವ ಸೇವೆಗಳು ನಮಗೆ ತೃಪ್ತಿಯಿಂದ ಕೂಡಿರಬೇಕು ನಮಗೆ ದೋಷಪೂರಿತ ಸರಕುಗಳು, ಸೇವೆಗಳಲ್ಲಿನ ಕೊರತೆ ಮತ್ತು ಅನ್ಯಾಯದ ವ್ಯಾಪಾರ ಪದ್ಧತಿಗಳಂತಹ ವಿವಿಧ ರೀತಿಯ ಶೋಷಣೆಗಳ ವಿರುದ್ಧ ಗ್ರಾಹಕರಿಗೆ ಪರಿಣಾಮಕಾರಿ ರಕ್ಷಣೆಯನ್ನು ಒದಗಿಸುವುದು ಗ್ರಾಹಕ ಸಂರಕ್ಷಣಾ ಕಾಯಿದೆಯ ಉದ್ದೇಶವಾಗಿದೆ. ಗ್ರಾಹಕರು ತಮ್ಮ ಹಕ್ಕುಗಳ ಬಗ್ಗೆ ಅರಿವು ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ ಮತ್ತು ಇದರೊಂದಿಗೆ ಅವರು ವಂಚನೆ, ಬ್ಲಾಕ್ ಮಾರ್ಕೆಟಿಂಗ್ ಇತ್ಯಾದಿಗಳಿಗೆ ಬಲಿಯಾಗಿದ್ದರೆ ಅವರು ಅದರ ಬಗ್ಗೆ ದೂರು ನೀಡಬಹುದು ಎಂದು ಅವರು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಹಾರ ಸುರಕ್ಷತಾ ಅಧಿಕಾರಿಗಳಾದ ಆರ್.ಎಸ್ ಬಿರಾದಾರ ಮಾತನಾಡಿ ಪ್ರತಿಯೊಬ್ಬ ಸಾರ್ವಜನಿಕರು ವಿತರಣೆ ಹಾಗೂ ಪಡೆದುಕೊಳ್ಳುವ ಕಾರ್ಯದಲ್ಲಿ ತೊಡಗಿರುತ್ತಾರೆ. ನಮಗೆ ಇಷ್ಟ ಬಂದ ಹಾಗೆ ವಸ್ತುಗಳನ್ನು ಪಡೆದುಕೊಳ್ಳುವ ಹಕ್ಕು ನಮ್ಮದಾಗಿದೆ ಯಾವುದೇ ವಸ್ತುಗಳನ್ನು ಖರೀದಿಸುವ ಮುಂಚೆ ಇಲಾಖೆಗಳ ಮಾಡದಂಡಗಳನ್ನು ಗಮನದಲ್ಲಿಟ್ಟು ಖರಿದಿಸಬೇಕು ಗ್ರಾಹಕರ ಗ್ರಾಹಕರ ಆರೋಗ್ಯದ ಹಿತ ದೃಷ್ಟಿಯಿಂದ ಕಲಬೆರಿಕೆಯಿಂದ ಕೂಡಿ-ದ ವಸ್ತುಗಳನ್ನು ಖರೀದಿಸಬೇಡಿ ಹಾಗೂ ಈ ಕುರಿತು ಇಲಾಖೆಗಳ ಕೈಪಿಡಿಗಳಲ್ಲಿರುವ ಮಾಹಿತಿ ತಮಗೆ ತಿಳಿದಿರಬೇಕು ಒಂದು ವೇಳೆ ವಿತರಕರು ಹಕ್ಕುಗಳನ್ನು ಮೀರಿ ವರ್ತಿಸಿದಲ್ಲಿ ಗ್ರಾಹಕರ ವೇದಿಕೆಗೆ ದೂರು ಸಲ್ಲಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥ ಪಡೆದಿಕೊಳ್ಳಬಹುದಾಗಿದೆ ಎಂದು ಅವರು ಹೇಳಿದರು.

ನ್ಯಾಯವಾದಿ ಹಾಗೂ ಬಳಕೆದಾರರ ಸಂಘದ ಅಧ್ಯಕ್ಷರಾದ ಎಮ್.ಜಿ ಮಠಪತಿ ಕಾರ್ಯಕ್ರಮದ ಅತಿಥಿ ಉಪನ್ಯಾಸಕರಾಗಿ ಮಾತನಾಡಿ ಕೋವಿಡ್ ಸಮಯದಲ್ಲಿ ಆರಂಭವಾದ ಡಿಜಿಟಲ್ ವ್ಯವಹಾರ ದೇಶದ ಆರ್ಥಿಕತೆಗೆ ಬಹಳ ಅನುಕೂಲವಾಗಿದೆ. ವರ್ಚುವಲ್ ಮೂಲಕ ಕೋರ್ಟಗಳಲ್ಲಿ ವಿಡೀಯೋ ಸಂವಾದಗಳ ಮೂಲಕ ವ್ಯಾಜ್ಯಗಳನ್ನು ಬಗೆಹರಿಸಲಾಗುತ್ತಿದೆ ಇದರಿಂದ ಸಾಕಷ್ಟು ಸಮಯ ಅಲೆದಾಡುವುದನ್ನು ಕೂಡ ತಪ್ಪಿಸಬಹುದಾಗಿದೆ




ಆನ್‌ಲೈನ್ ಹಾಗೂ ವರ್ಚುವಲ್ ಮೂಲಕ ವ್ಯವಹರಿಸುವಾಗಿ ಬಹಳ ಎಚ್ಚರಿಕೆಯಿಂದ ವಸ್ತುಗಳನ್ನು ಖರಿದಿಸಬೇಕು ಇದರಲ್ಲಿಯೂ ಬಹಳಷ್ಟು ಮೋಸ, ವಂಚನೆಗಳು ಕಂಡು ಬಂದಿವೆ ಆದುದರಿಂದ ಗ್ರಾಹಕರು ಎಚ್ಚರಿಕೆಯಿಂದ ವಸ್ತುಗಳನ್ನು ಖರೀದಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಗ್ರಾಹಕರ ದೂರು ಪರಿಹಾರ ಆಯೋಗದ ಪ್ರಭಾರಿ ಅಧ್ಯಕ್ಷರಾದ ವಿದ್ಯಾಗ್ಲಲಗಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮಲ್ಲಿ ನಂಬಿಕೆ ಆತ್ಮ ವಿಶ್ವಾಸ ಕಡಿಮೆಯಾಗುತ್ತಿರುವುದರಿಂದ ಮೋಸ ವಂಚನೆಗಳು ನಡೆಯುತ್ತಿವೆ. ಪ್ರತಿಯೊಬ್ಬ ಗ್ರಾಹಕರು ತಮ್ಮ ಹಕ್ಕುಗಳು ಮತ್ತು ಜವಾಬ್ದಾರಿಗಳ ಬಗ್ಗೆ ಅರಿತಿಬೇಕು. ಬೆಳೆಯುತ್ತಿರುವ ಮಾರುಕಟ್ಟೆಯ ಗ್ರಾಹಕ ಸಂ-ಖ್ಯೆ ಹೆಚ್ಚಳವಾಗಿದೆ ಆದರೆ ಗ್ರಾಹಕರಲ್ಲಿ ಇನ್ನೂ ಅರಿವಿನ ಕೊರತೆ ಇದೆ. ಸರಕುಗಳ ಕಲಬೆರಕೆ, ತಮ್ಮನ್ನು ಮೂರ್ಖರನ್ನಾಗಿಸಲು ಇತರರನ್ನು ವಂಚಿಸುವುದು, ಗರಿಷ್ಠ ಲಾಭ ಗಳಿಸಲು ಉದ್ಯಮಿಗಳು ಅನೈತಿಕ ವಿಧಾನಗಳನ್ನು ಅನುಸರಿಸಿ ಮೋಸ ಮಾಡುವುದು, ತಪ್ಪು ಮತ್ತು ಸುಳ್ಳು ಜಾಹೀರಾತುಗಳ ಮೂಲಕ ಜನರನ್ನು ಮರುಳು ಮಾಡುವ ಪ್ರವೃತ್ತಿ ಬಹಳಷ್ಟು ಹೆಚ್ಚಾಗಿದೆ.ಅಂತಹ ಪರಿಸ್ಥಿತಿಯಲ್ಲಿ, ಗ್ರಾಹಕರು ಅನೇಕ ಸಮಸ್ಯೆಗಳನ್ನು ಮತ್ತು ತೊಂದರೆಗಳನ್ನು ಎದುರಿಸುತ್ತಿದ್ದ ಗ್ರಾಹಕರನ್ನು ಶೋಷಣೆಯಿಂದ ರಕ್ಷಿಸುವ ಸಲುವಾಗಿ, ಗ್ರಾಹಕ ಸಂರಕ್ಷಣಾ ಕಾಯ್ದೆ 1986 ಅನ್ನು 24 ಡಿಸೆಂಬರ್ 1986 ರಂದು ಜಾರಿಗೊಳಿಸಲಾಯಿತು ಇದರೊಂದಿಗೆ ಗ್ರಾಹಕರಿಗೆ ಮೂಲಭೂತ ಸೌರ್ಕರ್ಯಗಳು ಹಾಗೂ ತರಬೇತಿ ಅತ್ಯಶ್ಯಕವಾಗಿವೆ. ಸಾರ್ವಜನಿಕರಲ್ಲಿ ಜನ ಜಾಗೃತಿ ಮೂಡಿಸುವಂತಹ ಇಂತಹ ಕಾರ್ಯಕ್ರಮಗಳನ್ನು ಹೆಚ್ಚು ಹೆಚ್ಚು ಆಯೋಜಿಸಬೇಕು ಎಂದು ಅವರು ಹೇಳಿದರು.

ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ್ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ನ್ಯೂ ಸಂಸ್ಥೆಯ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರದ ಅಧ್ಯಕ್ಷರಾದ ಎಸ್.ಎಮ್ ಕರೇಕಲ್, ಅಂಜುಮನ್ ಕಾನೂನು ಮಹಾವಿದ್ಯಾಲಯ ಪ್ರಾಂಶುಪಾಲರಾದ ಡಾ.ಸಂತೋಷ ನಾಗಠಾಣ, ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ವ್ಯವಸ್ಥಾಪಕರಾದ ಅಮರೇಶ ತಾಂಡೂರ, ಆಹಾರ ಶಿರಸ್ತೇದಾರರಾದ ಸಿ.ಎಸ್ ಚಿತ್ತಾಪುರ, ಆಹಾರ ನಿರೀಕ್ಷಕರಾದ ವಿಜಯಕುಮಾರ ಗುಮಶೆಟ್ಟಿ, ಎನ್.ಎಮ್ ಅತ್ತಾರ, ಸಹಾಯಕ ನಿರ್ದೇಶಕರಾದ ಮಲ್ಲಿಕಾರ್ಜುನ ಅರಕೇರಿ, ನಾಮದೇವ ಚವ್ಹಾಣ, ಅಂಜುಮನ್ ಕಾನೂನು ಮಹಾವಿದ್ಯಾಲಯ ಬೋಧಕ ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಆಹಾರ ಸುರಕ್ಷತೆ ಕರಿತು ಕಿರು ಪುಸ್ತಕ ಬಿಡುಗಡೆಗೊಳಿಸಲಾಯಿತು.

# ಅಗ್ನಿಮಠದಲ್ಲಿ ಕಾರ್ತಿಕೋತ್ಸವ ಮಹಾ ಮಂಗಲ

**ತಾಳಿಕೋಟೆ:** ಸ್ಥಳೀಯ ಪುರಾತನ ಮಠವಾದ ಅಗ್ನಿಮಠ(ಚರಂತಿಮಠ)ದಲ್ಲಿ ಕಳೆದ 45 ದಿವಸಗಳಿಂದ ಸಾಗಿಬಂದ ಕಾರ್ತಿಕೋತ್ಸವದ ದಿಪೋತ್ಸವವು ಶುಕ್ರವಾರರಂದು ಸಹಸ್ರಾರು ದೀಪ ಬೆಳಗಿಸುವದರೊಂದಿಗೆ ಮಹಾ ಮಂಗಲಗೊಂಡಿತು.

ಈ ಉತ್ಸವದ ನಿಮಿತ್ಯವಾಗಿ ಲಿಂ.ಶಾಂತವೀರ ಶಿವಯೋಗಿಗಳ ಹಾಗೂ ಮುರುಘೇಂದ್ರ ಶಿವಯೋಗಿಗಳ ಶ್ರೀಮಠದಲ್ಲಿಯ ಗದ್ದುಗೆಗಳಿಗೆ ಮಹಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಜರುಗಿತು.



ಕಾರ್ತಿಕೋತ್ಸವ ನಿಮಿತ್ಯವಾಗಿ ಶ್ರೀಮಠದ ಪೀಠಾಧಿಪತಿಗಳಾದ ಶಿವಯೋಗಿ ಶಿವಾಚಾರ್ಯ(ಚರಂತಿಮಠ) ಅವರು ಭಕ್ತರನ್ನುದ್ದೇಶಿಸಿ ಮಾತನಾಡಿ ಕಾರ್ತಿಕ ಮಾಸ ಅಂದರೆ ಎಲ್ಲರಲ್ಲಿ ಭಕ್ತಿಭಾವ ಹರಿಯುತ್ತದೆ ಪವಿತ್ರವಾದ ಮಾಸ ಇದಾಗಿದ್ದು ಏನೇ ಸತ್ಕಾರ್ಯಗಳನ್ನು ಮಾಡಿದರೆ ಈ ದಿನಮಾನದಲ್ಲಿ ಭಕ್ತಿ ಶ್ರದ್ದೆಯಿಂದ ನಡೆದರೆ ಬೇಕು ಬೇಡಿಕೆಗಳು ಇಡೇರಲು ಸಾದ್ಯವಾಗಲಿದೆ ಎಂದರು. ಈ ಉತ್ಸವ ಕುರಿತು ಹಿರಿಯರು ಕೆಲವೊಂದು ಸಾಂಪ್ರಾಯಗಳನ್ನು ಹಾಕಿಕೊಂಡು ಬಂದಿದ್ದಾರೆ ಭಗವಂತನಿಗೆ ಸೂರ್ಯನಿಗೆ ದೀಪ ಬೆಳಗಿಸುದಕ್ಕೆ ಈ ಮಾಸಕ್ಕೆ ದೀಪ ಬೆಳಗಿಸುವ ಮಾಸವೆನ್ನಲಾಗುತ್ತಿದೆ ಎಂದ ಶ್ರೀಗಳು ನಿತ್ಯ ಎರಡು ಸಲ ಸ್ನಾನ ಮಾಡಿ ನಿತ್ಯ ಅನುಷ್ಠಾನ, ಜಪ, ತಪ ಮಾಡುವದರಿಂದ ಲವ ಲವಿಕೆ ಎಂಬುದು ಉಂಟಾಗುತ್ತದೆ ಇದರಿಂದಲೂ ಭಗವಂತನ ಕೃಪೆ ಪಡೆಯಲು ಅತ್ಯಂತ ಉಪಯೋಗವಾಗಲಿದೆ ಎಂದು ಹೇಳಿದ ಶ್ರೀಗಳು ಅಜ್ಞಾನವನ್ನು ದೂರಿಕರಿಸಿ ಜ್ಞಾನವನ್ನು ನೀಡುವಂತಹ ಕಾರ್ತಿಕ ಮಾಸ ಇದಾಗಿದೆ ಆಂತರಿಕವಾಗಿ ದೈವಿ ಭಕ್ತಿಯನ್ನು ಹುಟ್ಟಿಸುತ್ತದೆ ಎಂದು ಹೇಳಿದ ಶ್ರೀಗಳು ಅಗ್ನಿಮಠ(ಚರಂತಿಮಠ) ಶ್ರೀಮಠಕ್ಕೆ ಈ ಹಿಂದಿನಿಂದ ಆಗಿ ಹೋದ ಮಹಾತ್ಮರ, ಹಾಗೂ ಶಿವಯೋಗಿಗಳವರ ಕುರಿತು ಹಾಗೂ ಶ್ರೀಮಠದಲ್ಲಿ ಆಚರಿಸಿಕೊಂಡು ಬರಲಾಗುತ್ತಿರುವ ವಿವಿಧ ಉತ್ಸವಗಳ ಕುರಿತು ಶ್ರೀಗಳು ಭಕ್ತ ಸಮೂಹಕ್ಕೆ ವಿವರಿಸಿದರು.

ಈ ಸಮಯದಲ್ಲಿ ಸಂಗಯ್ಯ ಚರಂತಿಮಠ, ಪರಮಯ್ಯ ಹಿರೇಮಠ, ಶರಬಯ್ಯ ಪುರಾಣಿಕಮಠ, ವಿರುಪಾಕ್ಷಗೌಡ ಪಾಟೀಲ, ರಾಜು ಅಲ್ಲಾಪೂರ, ಶರಣು ಬಿಳೇಭಾವಿ, ಸಿದ್ದನಗೌಡ ಮದರಕಲ್ಲ, ಸುಭಾಸ ಅಲ್ಲಾಪೂರ, ನೀಲಕಂಠ ಬಬಲೇಶ್ವರ, ಶಂಕರ ಹಿರೇಮಠ, ಶಂಭು ಹಂದಿಗನೂರ, ಈರಣ್ಣ ಸಜ್ಜನ, ಶರಣಪ್ಪ ಪಾಲ್ಕಿ, ಮಲ್ಲನಗೌಡ ಮೊದಲಾದವರು ಉಪಸ್ಥಿತರಿದ್ದರು.

ಮಹಾ ಪ್ರಸಾದದೊಂದಿಗೆ ಕಾರ್ತಿಕೋತ್ಸವ ಮಹಾ ಮಂಗಲಗೊಂಡಿತು.

## ಅನಿಮಿಯಾ ಮುಕ್ತ ಜಿಲ್ಲೆಯನ್ನಾಗಿಸಲು ಶ್ರಮಿಸುವಂತೆ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತಿಯ ಸಿಇಒ ರಿಷಿ ಆನಂದ ಸೂಚನೆ

**ವಿಜಯಪುರ:** ಜಿಲ್ಲೆಯಲ್ಲಿನ ಎಲ್ಲ ಶಾಲೆಗಳಲ್ಲಿ ಶಾಲಾ ಆರಂಭದ ಅವಧಿಯಲಿ ವಿದ್ಯಾರ್ಥಿಗಳ ಆರೋಗ್ಯ ದೃಷ್ಟಿಯಿಂದ ಕಬ್ಬಿಣಾಂಶದ ಮಹತ್ವ ಹಾಗೂ ಅದರ ಕೊರತೆಯಿಂದಾಗುವ ಪರಿಣಾಮಗಳ ತಿಳಿವಳಿಕೆ ನೀಡಬೇಕು. ಅಂಗನವಾಡಿ ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ಕಬ್ಬಿಣಾಂಶದ ಕೊರತೆ ನಿವಾರಿಸಲು ಆರೋಗ್ಯ ಇಲಾಖೆಯಿಂದ ವಿತರಿಸಲಾಗಿರುವ ಕಬ್ಬಿಣಾಂಶದ ಮಾತ್ರೆಗಳನ್ನು (ಐಎಫ್‌ಎ) ಪ್ರತಿ ಸೋಮವಾರ ವಿದ್ಯಾರ್ಥಿಗಳಿಗೆ ವಿತರಿಸಿ, ಸೇವಿಸುವಂತೆ ಪ್ರೇರೆಪಿಸಬೇಕು. ಇದಕ್ಕಾಗಿ ಶಾಲೆಗಳಲ್ಲಿ ಓರ್ವ ನೋಡಲ್ ಶಿಕ್ಷಕರ ನೇಮಕ, ಆಯಾ ಶಾಲಾ ವ್ಯಾಪ್ತಿಯ ಬಿ.ಆರ್.ಸಿ ಮತ್ತು ಸಿ.ಆರ್.ಸಿಗಳು ಮತ್ತು ಅಂಗನವಾಡಿ ಮೇಲ್ವಿಚಾರಕಿಯರು ಮೇಲುಸ್ತುವಾರಿಯಲ್ಲಿ ಈ ಬಗ್ಗೆ ವರದಿಯನ್ನು ಆರೋಗ್ಯ ಇಲಾಖೆಯೊಂದಿಗೆ ಹಂಚಿಕೊಳ್ಳಲು ಶಾಲಾ ಶಿಕ್ಷಣ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಸೂಚಿಸಿದ್ದಾರೆ. ಅನಿಮಿಯಾ ಮುಕ್ತ ಜಿಲ್ಲೆಯನ್ನಾಗಿಸಲು ಡಬ್ಲ್ಯುಐಎಫ್‌ಎಸ್ ಕಾರ್ಯಕ್ರಮದ ಯಶಸ್ವಿ ಅನುಷ್ಠಾನ ಮೊದಲ ಹೆಜ್ಜೆಯಾಗಿರುತ್ತದೆ. ಜಿಲ್ಲೆಯಲ್ಲಿನ ಎಲ್ಲ ಶಾಲಾ ಮತ್ತು ಅಂಗನವಾಡಿ ಮಕ್ಕಳಲ್ಲಿ 3 ತಿಂಗಳೊಳಗಾಗಿ ಹೆಚ್.ಬಿ ಪರೀಕ್ಷೆ ಕೈಗೊಳ್ಳುವುದು ಮತ್ತು ಅನಿಮಿಯಾದಿಂದ ಬಳಲುತ್ತಿರುವ ಮಕ್ಕಳಿಗೆ ಅವಶ್ಯ ಚಿಕಿತ್ಸೆಗೆ ಕ್ರಮವಹಿಸುವುದು.

ಅದರಂತೆ, ಅಂಗನವಾಡಿ ಕೇಂದ್ರಗಳಲ್ಲಿನ 1ರಿಂದ 5 ವರ್ಷದ ಮತ್ತು ಶಾಲೆಗಳಲ್ಲಿನ 06-18 ವರ್ಷದ ಮಕ್ಕಳಿಗೆ ವರ್ಷದಲ್ಲಿ 2 ಬಾರಿ ಅಲ್ಬೆಂಡಜೋಲ್ ಮಾತ್ರೆಗಳನ್ನು ಕಡ್ಡಾಯವಾಗಿ ವಿತರಿಸಿ ಜಂತುಹುಳು ನಿವಾರಣಾ ಕಾರ್ಯಕ್ರಮವನ್ನು ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳ ಸಮನ್ವಯದೊಂದಿಗೆ ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿದೆ. ಜಿಲ್ಲೆಯಲ್ಲಿನ ಅಂಗನವಾಡಿಗಳಲ್ಲಿ ಮಕ್ಕಳಿಗೆ, ಗರ್ಭಿಣಿಯರಿಗೆ, ಬಾಣಂತಿಯರಿಗೆ ಮತ್ತು ಶಾಲೆಗಳಲ್ಲಿನ ಮಕ್ಕಳಿಗೆ ಬಿಸಿಯೂಟ ಕಾರ್ಯಕ್ರಮದ ಮೂಲಕ ಸರ್ಕಾರದ ವತಿಯಿಂದ ವಿತರಿಸಲಾಗುತ್ತಿರುವ ಪೌಷ್ಠಿಕ ಆಹಾರವನ್ನು ಅವರುಗಳು ಸೇವನೆ ಮಾಡುತ್ತಿರುವ ಬಗ್ಗೆ ಆಯಾ ಶಾಲಾ ಶಿಕ್ಷಕರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ನಿಗಾವಹಿಸುವಂತೆ ಸೂಚಿಸಿದ್ದಾರೆ.

ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಸತಿ ನಿಲಯಗಳಿಗೆ ನಿಯಮಿತವಾಗಿ ವೈದ್ಯರುಗಳ ತಂಡ ಭೇಟಿ ನೀಡಿ, ಮಕ್ಕಳ ಆರೋಗ್ಯ ತಪಾಸಣೆ ಕೈಗೊಳ್ಳುವುದು ಮತ್ತು ವಸತಿ ನಿಲಯಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಲು ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡುವುದು.

ಜಿಲ್ಲೆಯಲ್ಲಿ ಕಂಡು ಬರುವ ಅಪೌಷ್ಠಿಕ ಮಕ್ಕಳ ಆರೋಗ್ಯ ತಪಾಸಣಾ ಶಿಬಿರಗಳ ಆಯೋಜನೆ ಮೂಲಕ ತಜ್ಞ ವೈದ್ಯರಿಂದ ಚಿಕಿತ್ಸೆ ಕೊಡಿಸುವುದು ಮತ್ತು ಅಪೌಷ್ಠಿಕ ಮಕ್ಕಳನ್ನು ಪೌಷ್ಠಿಕ ಪುನಶ್ಚೇತನ ಕೇಂದ್ರಗಳಿಗೆ ಕಳುಹಿಸಿ ಅವರುಗಳಿಗೆ ಅವಶ್ಯವಿರುವ ಸೂಕ್ತ ಚಿಕಿತ್ಸೆಯನ್ನು ಕೊಡಿಸಲು ಕ್ರಮ ಕೈಗೊಳಲಾಗುತ್ತಿದೆ. ಈ ಎಲ್ಲ ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು, ಸಾರ್ವಜನಿಕ ಶಿಕ್ಷಣ ಇಲಾಖೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಇತರ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವುದು ಅವಶ್ಯವಾಗಿರುವುದ ರಿಂದ ಆಯಾ ಇಲಾಖೆಗಳು ತಮ್ಮ ಜವಾಬ್ದಾರಿಗಳನ್ನು ಅರಿತು ಯಶಸ್ವಿಯಾಗಿ ನಿಭಾಯಿಸಿ ಜಿಲ್ಲೆಯನ್ನು ಅನಿಮಿಯಾ ಮುಕ್ತ ವಿಜಯಪುರ ಜಿಲ್ಲೆಯನ್ನಾಗಿಸಲು ಪಣ ತೊಡೋಣ, ಸಾರ್ವಜನಿಕರು ಸರಕಾರದ ಈ ಎಲ್ಲ ಯೋಜನೆಗಳ ಸದ್ಬಳಕೆ ಮಾಡಿಕೊಂಡು ಉತ್ತಮ ಆರೋಗ್ಯ ರೂಪಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ತಿಳಿಸಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರೀಡೆಯೂ ಪ್ರತಿಯೊಬ್ಬರ ಜೀವನದಲ್ಲಿ ವಿಶೇಷ ಪಾತ್ರವನ್ನು ವಹಿಸುತ್ತಿದೆ

**ಲೋಕಾಪುರ :** ಕ್ರೀಡೆಯೂ ಪ್ರತಿಯೊಬ್ಬರ ಜೀವನದಲ್ಲಿ ವಿಶೇಷ ಪಾತ್ರವನ್ನು ವಹಿಸುತ್ತಿದೆ, ಆರೋಗ್ಯವಂತ ದೇಹದಿಂದ ಮಾತ್ರ ಮನಸ್ಸು ಆರೋಗ್ಯವಾಗಿರಲು ಸಾಧ್ಯ ನಾವು ಎಲ್ಲಾ ಸಮಯದಲ್ಲೂ ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಂಡಾಗ ಮಾತ್ರ ಜೀವನದಲ್ಲಿ ಉತ್ತಮ ಸಾಧನೆಗಳನ್ನು ಸಾಧಿಸಬಹುದು ಎಂದು ಬಸವೇಶ್ವರ ಅಂತರಾಷ್ಟ್ರೀಯ ಪಬ್ಲಿಕ್ ಶಾಲೆಯ ಪ್ರಾಂಶುಪಾಲ ಪರಶುರಾಮ್ ವನಸಿ ಹೇಳಿದರು.



ಪಟ್ಟಣದ ಬಸವೇಶ್ವರ ಅಂತರಾಷ್ಟ್ರೀಯ ಪಬ್ಲಿಕ್ ಶಾಲೆಯ ಕ್ರೀಡಾಕೂಟಕ್ಕೆ ಪ್ರಾಯೋಗಿಕವಾಗಿ ಚಾಲನೆ ನೀಡಿ ಮಾತನಾಡಿದ ಅವರು ಮನರಂಜನೆ ಮತ್ತು ದೈಹಿಕ ಚಟುವಟಿಕೆಯು ಅತ್ಯಂತ ಉಪಯುಕ್ತ ಎಂದು ತಿಳಿಸಿದರು, ಜೊತೆಗೆ ಕ್ರೀಡಾ ಪ್ರತಿಜ್ಞೆಯನ್ನು ಬೋಧಿಸಿದರು.

ಮುಖ್ಯ ಅತಿಥಿಗಳಾಗಿ ಎಸ್.ಎಂ.ಕುರಣಿ ಮಾತನಾಡಿ ವಿದ್ಯಾರ್ಥಿಗಳು ದೈಹಿಕವಾಗಿ ಸದೃಢವಾಗಲು ಪಾಠದ ಜೊತೆಗೆ ಆಟವು ಮುಖ್ಯ ಎಂದ ಅವರು ವಿಶ್ವ ಚೆಸ್ ಚಾಂಪಿಯನ್ ಆದ ಡಿ.ಗುಕೇಶ ಅವರ ಸಹನಾ ಗುಣಗಳನ್ನು ನೀವೆಲ್ಲರೂ ಅನುಸರಿಸಬೇಕು ಎಂದು ತಿಳಿಸಿದರು. ವ್ಹಿ.ಎಸ್.ಪಾಟೀಲ ಶಿಕ್ಷಕರು ಮಾತನಾಡಿ ಜ್ಞಾನ, ಶ್ರದ್ಧೆ ಮತ್ತು ಶ್ರೇಷ್ಠತೆಯನ್ನು ಉತ್ತೇಜಿಸುವುದು ಕ್ರೀಡೆಯ ಮೂಲಕ ಸಾಧ್ಯ ಎಂದರು.

ಮೂರನೇ ತರಗತಿಯ ವಿದ್ಯಾರ್ಥಿಗಳು ಕ್ರೀಡೆಯ ಕುರಿತು ನೃತ್ಯವನ್ನು ಪ್ರದರ್ಶಿಸಿದರು. ವಿದ್ಯಾರ್ಥಿ ಪ್ರತಿನಿಧಿ ಮತ್ತು ಕ್ರೀಡಾಮಂತ್ರಿ ಕ್ರೀಡಾ ಜ್ಯೋತಿಯನ್ನು ತಂದರು. ವೇದಿಕೆ ಮೇಲಿದ್ದ ಎಲ್ಲಾ ಅತಿಥಿಗಳು ಕ್ರೀಡಾ ಜ್ಯೋತಿಯನ್ನು ಬೆಳಗಿಸಿದರು. ಕ್ರೀಡಾ ಮಂತ್ರಿ ಮಧು ಪಾಟೀಲ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಕ್ರೀಡೆಯ ಮಹತ್ವದ ಕುರಿತು ತಿಳಿಸಿದಳು.

ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಜ್ಯೋತಿ ಉಪ್ಪಾರ, ಕ್ಷೇತ್ರ ಸಮೂಹ ಸಂಪನ್ಮೂಲ ವ್ಯಕ್ತಿ ಕೆ.ಎಲ್.ಮಾಳೇದ, ದೈಶಿ ಮಂಜುನಾಥ ಪಾಟೀಲ, ಎಸ್.ಎಂ.ಹುದ್ದಾರ, ಎಸ್.ಬಿ.ಪಾಟೀಲ, ವ್ಹಿ.ವ್ಹಿ.ಪಾಟೀಲ, ಎಸ್.ಎಂ.ಮಿರ್ಜಿ, ಕಟ್ಟಿಮನಿ ಗಂಗಾಧರ ಗಾಣಗೇರ, ದೈಹಿಕ ಶಿಕ್ಷಕ ಅಡವೇಶ ಕಲ್ಲಿ, ಮಹಾಂತೇಶ ಉಳ್ಳಾಗಡ್ಡಿ ಗುರುಗಳ ನಿರ್ದೇಶನದ ಮೇರೆಗೆ ಎಲ್ಲಾ ತಂಡಗಳ ಪಥಸಂಚಲನ ನಡೆಸಲಾಯಿತು. ಅತಿಥಿಗಳು ಗುಂಡು ಎಸೆತ ಆಟವನ್ನು ಆಡುವುದರ ಮೂಲಕ ಕ್ರೀಡಾಕೂಟಕ್ಕೆ ಪ್ರಾಯೋಗಿಕವಾಗಿ ಚಾಲನೆ ನೀಡಲಾಯಿತು. ಖುಷಿ ವನಸಿ ಸ್ವಾಗತಿಸಿ, ಪ್ರಥಮ ಮತ್ತು ಸಾತ್ವಿಕ್ ವಂದಿಸಿದರು.

## ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ನಿಧನಕ್ಕೆ ಭಾಜಪಾ ಮುಖಂಡ ನಬಿ ಅನಗವಾಡಿರವರಿಂದ ಶೋಕ ಸಂತಾಪ



**ಸಿಂಧನೂರು :** ನಮ್ಮ ದೇಶದ ಸತತ ಎರಡು ಅವಧಿಗೆ 10 ವರ್ಷಗಳ ಪ್ರಧಾನ ಮಂತ್ರಿಯಾಗಿ ದೇಶವನ್ನು ಮುನ್ನಡೆಸಿದ ಮನಮೋಹನ್ ಸಿಂಗ್ ಅವರು 92 ವಯಸ್ಸಿನಲ್ಲಿ ವಿಧಿವಶರಾಗಿದ್ದು ನಮ್ಮ ದೇಶಕ್ಕೆ ಹಾಗೂ ರಾಜಕೀಯ ರಂಗ-ಕ್ಕೆ ತುಂಬಲಾರದ ನಷ್ಟ ಅವರು ನೀಡಿದ ನರೇಗಾ ಉದ್ಯೋಗ ಖಾತ್ರಿ ಯೋಜನೆ, ಶಿಕ್ಷಣ ಕಲೆ ವಿಜ್ಞಾನ ಕ್ರೀಡೆ ಮಹತ್ವದ ಕಾಯಿದೆ ಬಿಲ್ಲುಗಳು, ಲೋಪಾಲ್ ಬಿಲ್, ಮಾಹಿತಿ ಹಕ್ಕು ಆಯೋಗ, ರಾಷ್ಟ್ರೀಯ ಶಿಕ್ಷಣ ಕಾಯಿದೆ,

ಈಗೇ ಅನೇಕ ದೂರ ದೃಷ್ಟಿಯ ಯೋಜನೆಯನ್ನು ದೇಶಕ್ಕೆ ಸಮರ್ಪಿಸಿ

ಈ ದೇಶವನ್ನು ಆರ್ಥಿಕ ಮುಗ್ಗಟ್ಟಿನಿಂದ ಪಾರು ಮಾಡಿದ ಮಹಾನ್ ಮೇಧಾವಿ ಡಾಕ್ಟರ್ ಮನಮೋಹನ್ ಸಿಂಗ್ ಅವರ ನಿಧನಕ್ಕೆ ನಮನ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರು ಹಾಗೂ ಭಾರತೀಯ ಜನತಾ ಪಾರ್ಟಿಯ ಅಲ್ಪಸಂಖ್ಯಾತರ ಮೋರ್ಚಾದ ರಾಜ್ಯ ಕಾರ್ಯದರ್ಶಿಯಾದ ಅನಗವಾಡಿ ನಬಿ ಮ ನದಾಫ್ ನುಡಿ ನಮನ ಸಲ್ಲಿಸಿ ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಹಾಗೂ ಅವರ ಅಪಾರ ವಾದಂತಹ ಕುಟುಂಬ ವರ್ಗ ಅಭಿಮಾನಿ ವರ್ಗಕ್ಕೆ ದುಃಖ ಭರಿಸುವ ಶಕ್ತಿ ಕರುಣಿಸಲಿ ಎಂದು ಪ್ರಾರ್ಥಿಸುವೆ ಎಂದು ಶೋಕ ಸಂತಾಪ ವ್ಯಕ್ತಪಡಿಸಿದ್ದಾರೆ.

ಈ ಸಂತಾಪ ಸೂಚಕ ಸಂದರ್ಭದಲ್ಲಿ ಸಭೆಯಲ್ಲಿ ಮುನ್ನಾ ಚಿಕ್ಕಲಾಗುಂಡಿ,

ರಾಜಪಾಲ ಹಂಚಿನಾಳ, ಸದ್ದಾಮ್ ಹುಸೇನ್, ರಿಯಾಜ್, ಮೋದಿನವರ್ ಶಿರಾಜ ಸೇರಿದಂತೆ ಅನೇಕ ಸದಸ್ಯರು ಉಪಸ್ಥಿತರಿದ್ದರು.

## ಜಿಎಚ್‌ಪಿಎಸ್ ಶಾಲೆಗೆ ಆರ್‌ಒ ನೀರು ಶುದ್ಧೀಕರಣ ಯಂತ್ರ ದಾನ



**ಕೊಪ್ಪಳ :** ಇನ್ನರ್ ವೀಲ್ ಕ್ಲಬ್ ಕೊಪ್ಪಳವು ಸರ್ಕಾರಿ ಉನ್ನತ ಪ್ರಾಥಮಿಕ ಶಾಲೆ (ಜಿಎಚ್‌ಪಿಎಸ್) ಗೆ ?2 ಲಕ್ಷ ಮೌಲ್ಯದ ಆಧುನಿಕ ಆರ್‌ಒ ನೀರು ಶುದ್ಧೀಕರಣ ಯಂತ್ರವನ್ನು ಸ್ಥಾಪಿಸಿರುವುದನ್ನು ಹೆಮ್ಮೆಪಡುವಂತೆ ಘೋಷಿಸುತ್ತದೆ.

ಈ ಮಹತ್ವದ ದಾನವನ್ನು ಬೆಂಗಳೂರು ಮೂಲದ ಕುಮಾರಸ್ವಾಮಿ ಮಿನರಲ್ ಎಕ್ಸ್‌ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಚಂದ್ರಕಾಂತ ಪಾಟೀಲ ಅವರು ಮಾಡಿರುವುದು ವಿಶೇಷವಾಗಿರುತ್ತದೆ.

ಈ ಯೋಜನೆಯು ವಿದ್ಯಾರ್ಥಿಗಳು ಮತ್ತು ಶಾಲಾ ಸಿಬ್ಬಂದಿಗಳಿಗೆ ಶುಚಿ ಮತ್ತು ಸುರಕ್ಷಿತ ಕುಡಿಯುವ ನೀರಿನ ಪ್ರಾಪ್ತಿಯನ್ನು ಖಾತ್ರಿಪಡಿಸುವಲ್ಲಿ ಮಹತ್ತರ ಪಾತ್ರವನ್ನು ವಹಿಸುತ್ತದೆ.

ಇದು ಸಮುದಾಯದ ಕಲ್ಯಾಣ ಮತ್ತು ಆರೋಗ್ಯಕ್ಕೆ ತೆರೆದ ಹೃದಯದಿಂದ ಸೇವೆ ನೀಡುವ ಇನ್ನರ್ ವೀಲ್ ಕ್ಲಬ್‌ನ ತಾತ್ಪರ್ಯವನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ.

ಈ ಕಾರ್ಯಕ್ರಮದಲ್ಲಿ ಇನ್ನರ್ ವೀಲ್ ಕ್ಲಬ್ ಕೊಪ್ಪಳದ ಅಧ್ಯಕ್ಷೆ ಉಮಾ ತಂಬ್ರಳ್ಳಿ ಮತ್ತು ಮಾಜಿ ಅಧ್ಯಕ್ಷೆ ಸುಜಾತಾ ಪಟ್ಟಣಶೆಟ್ಟಿ ಸೇರಿದಂತೆ ಶಾಲೆಯ ಮುಖ್ಯ ಶಿಕ್ಷಕ ನಟರಾಜ್, ನಾಗರಾಜ್ ಮತ್ತು ಆರ ಓ ಟೆಕ್ನಿಷಿಯನ್ ಮಲ್ಲಿಕಾರ್ಜುನ್ ಮತ್ತಿತರರು ಉಪಸ್ಥಿತರಿದ್ದರು.

# ಶ್ರೀ ಮೇಘರಾಜೇಂದ್ರ ಸ್ವಾಮಿಜಿಗಳಿಂದ ಡಾ. ಅನಿಲ್‌ಕುಮಾರ್ ಬೇಗಾರಗೆ ಸನ್ಮಾನ

**ಕೊಪ್ಪಳ :** ಪಕ್ಕದ ಗದಗ್ ಜಿಲ್ಲೆಯ ರೋಣ ತಾಲೂಕಿನ ಸುಕ್ಷೇತ್ರ ಯಾವಗಲ್ ಮುರನಾಳ ಮಠದ ಪೀಠಾಧಿಪತಿ ಗಳಾದ ಶ್ರೀ ಮೇಘರಾಜೇಂದ್ರ ಮಹಾಸ್ವಾಮಿಜಿ ಗಳವರ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕೊಪ್ಪಳದ ಹಿರಿಯ ಸಮಾಜಸೇವಕರಾದ ಮತ್ತು ಶ್ರೀ ನಾಗರತ್ನ ಶಿಕ್ಷಣ ಸೇವಾ ಸಂಸ್ಥೆಯ ಸಂಸ್ಥಾಪಕರಾದ ಡಾ, ಅನಿಲ್ ಕುಮಾರ್ ಬೇಗಾರ ರವರಿಗೆ ಸನ್ಮಾನಿಸಿ ಶುಭ ಕೋರಿ ಆಶೀರ್ವದಿಸಿದರು,



ಭವಿಷ್ಯತ್ ನಲ್ಲಿ ಉತ್ತಮ ನಾಯಕರಾಗಿ ಪರಿವರ್ತನೆ ಹೊಂದಲಿ ಸಮಾಜಕ್ಕೆ ಇನ್ನಷ್ಟು ಉತ್ತಮ ಸೇವೆ ತಮ್ಮಿಂದ ದೊ-ರೆಕಲಿ ಎಂದು ಡಾ, ಅನಿಲ್ ಕುಮಾರ್ ಬೇಗಾರ್ ರವರ ಬಗ್ಗೆ ಸ್ವಾಮೀಜಿಯವರು ಶುಭನುಡಿ ಗಳನ್ನಾಡಿದರು, ಸ್ವಾಮೀಜಿಯವರ ನವದಂಪತಿ ಸೇರಿದಂತೆ ಭಕ್ತಾದಿಗಳು ಸಾರ್ವಜನಿಕರು ಕಾರ್ಯಕರ್ತರು ಮತ್ತು ಅಭಿಮಾನಿಗಳು ಪಾಲ್ಗೊಂಡಿದ್ದರು.

## ಬಸವರಾಜ ಚನ್ನಪ್ಪ ಗಾಡವಿ ನಿಧನ

**ಮಹಾಲಿಂಗಪುರ :** ಸಮೀಪದ ರನ್ನಬೆಳಗಲಿ ಪಟ್ಟಣದ ನಿವಾಸಿ, ಬಣಜಿಗ ಸಮಾಜದ ಬಸವರಾಜ ಚನ್ನಪ್ಪ ಗಾಡವಿ ತಮ್ಮ 43 ನೆಯ ವಯಸ್ಸಿನಲ್ಲಿ ಡಿಸೆಂಬರ್ 22 ರಂದು ನಿಧನರಾದರು. ಅವರು ತಮ್ಮ ಹಿಂದೆ ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.



## ಶ್ರೀಮಂತ ಹಜಾರೆ ನಿಧನ

**ಬನಹಟ್ಟಿ :** ಇಲ್ಲಿಯ ಮಂಗಳವಾರ ಪೇಟೆ ನಿವಾಸಿ ಶ್ರೀಮಂತ ಹಜಾರೆ ತಮ್ಮ 69 ನೆಯ ವಯಸ್ಸಿನಲ್ಲಿ ಡಿಸೆಂಬರ್ 22 ರಂದು ನಿಧನರಾದರು. ಮೃತರು ತಮ್ಮ ಹಿಂದೆ ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.



"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State